ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ ದಾವಣಗೆರೆ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

# ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01 ಸಂಚಿಕೆ : 71 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 25-09-2026 ಪುಟ : 04 ಬೆಲೆ : 2-00

## ಇಂದಿನ ಪ್ರಮುಖ


- ಅಂತರ್ಜಲ ಕುಸಿತ: ವೈಜ್ಞಾನಿಕ ಯೋಜನೆ ಅಗತ್ಯ-ಸಿಇಒ ಸಾಹಿತ್ಯ 02
- ಪ್ರಾಥಮಿಕ ಶಿಕ್ಷಣಕ್ಕೆ ಡಿಜಿಟಲ್ ತಂತ್ರಜ್ಞಾನ ಪೂರಕ: ಪ್ರಭುಕುಮಾರ ಸ್ವಾಮೀಜಿ 03
- 26ನೇ ವಾರ್ಷಿಕ ಸರ್ವಸಾಧಾರಣ ಸಭೆ ಬ್ಯಾಂಕ್ ಅಭಿವೃದ್ಧಿಗೆ ಸಮಾಜದ ಸಹಕಾರ ಅಗತ್ಯ 02
- ಕನ್ನೇರಿ ಶ್ರೀಗಳ ಬಸವಾದಿ ಶಿವಶರಣರ ಬೃಹತ್ ಸಮಾವೇಶಕ್ಕೆ ಹಡಪದ ಅಪ್ಪಣ್ಣ ಸಮಾಜದ ಬೆಂಬಲ 03
- ಕೃಷಿ ಸಂಸ್ಕೃತಿಯ ಪರಿಚಯಕ್ಕೆ ರೋಟರಿ ಶಾಲೆಯ ವಿನೂತನ ಹೆಜ್ಜೆ 03


## ಬರದಿಂದ ತತ್ತರಿಸಿರುವ ರೈತರಿಗೆ 2,500 ಆರ್ಥಿಕ ನೆರವು:

# ಬ್ಯಾಂಕ್ ಖಾತೆಗಳಿಗೆ ನೇರ ಜಮೆ!



ಬೆಂಗಳೂರು: ಕರ್ನಾಟಕದಲ್ಲಿ ಬರ ಪರಿಸ್ಥಿತಿ ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ತಕ್ಷಣದ ಆರ್ಥಿಕ ನೆರವು ನೀಡಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಳ್ಳಲು ಮುಂದಾಗಿದೆ. ಮೊದಲ ಹಂತವಾಗಿ ರಾಜ್ಯದ ಸುಮಾರು 40 ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ತಲಾ 2,500 ರೂಪಾಯಿಗಳನ್ನು ನೇರವಾಗಿ ಜಮೆ ಮಾಡಲು ತೀರ್ಮಾನಿಸಲಾಗಿದೆ.

ಕೇಂದ್ರ ಸರ್ಕಾರದಿಂದ ಬರ ಪರಿಹಾರದ ಹಣ ಬಿಡುಗಡೆಯಾಗುವುದನ್ನು ಕಾಯದೆ, ರಾಜ್ಯ ಸರ್ಕಾರವೇ ತನ್ನ ಸಂಪನ್ಮೂಲಗಳಿಂದ ರೈತರಿಗೆ ತಾತ್ಕಾಲಿಕ ನೆರವು ನೀಡಲು ಮುಂದಾಗಿದೆ. ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದ್ದು, ರೈತರ ಖಾತೆಗೆ 2,500 ರೂಪಾಯಿ ಹಾಕೋದಾಗಿ ಸಿಎಂ ಡಿಕೆ ಶಿವಕುಮಾರ್ ಅವರು ಅಧಿಕೃತವಾಗಿ ಘೋಷಿಸಿದ್ದಾರೆ.

ಇದರಿಂದ ಬರ ಹಾಗೂ ಸಂಕಷ್ಟದಿಂದ

2ನೇ ಪುಟಕ್ಕೆ...

## ತ.ನಾಡಿಗೆ 4 ಸಾವಿರ ಕ್ಯೂಸೆಕ್ ನೀರು


ನವದೆಹಲಿ: ತಮಿಳುನಾಡಿಗೆ ನಿತ್ಯ 4 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಮಂಡಳಿಯು ಗುರುವಾರ ಶಿಫಾರಸು ಮಾಡಿದೆ. ಇಂದು ನಡೆದ ಮಂಡಳಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಮುಂದಿನ 15 ದಿನಗಳ ಕಾಲ ನೀರು ಹರಿಸಬೇಕು ಎಂದು ಮಂಡಳಿ ಸೂಚಿಸಿದೆ.



ಪ್ರತಿದಿನ 6 ಸಾವಿರ ಕ್ಯುಸೆಕ್ ನೀರನ್ನು ತಮಿಳುನಾಡಿಗೆ ಹರಿಸಬೇಕು ಎಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು ಸೆಪ್ಟೆಂಬರ್ 8ರಂದು ನಿರ್ದೇಶನ ನೀಡಿತ್ತು. ರಾಜ್ಯದ ಬರ ಪರಿಸ್ಥಿತಿಯನ್ನು ಪರಿಗಣನೆಗೆ ತೆಗೆದುಕೊಳ್ಳದೇ ಪ್ರಾಧಿಕಾರ ಈ ನಿರ್ದೇಶನ ನೀಡಿದೆ ಎಂದು ರಾಜ್ಯ ಸರ್ಕಾರ ಆಕ್ಷೇಪ ವ್ಯಕ್ತಪಡಿಸಿತ್ತು. ಈ ಸಂಬಂಧ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ

2ನೇ ಪುಟಕ್ಕೆ...

## CEC ವಿರುದ್ಧ ವಿವಾದಾತ್ಮಕ ಹೇಳಿಕೆ



ನವದೆಹಲಿ: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಭಾರತೀಯ ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ತೀವ್ರವಾಗಿ ಟೀಕಿಸಿದ ವಿಕಾಸ್‌ಶೀಲ್ ಇನ್ಸಾನ್ ಪಾರ್ಟಿ ಮುಖ್ಯಸ್ಥ ಮುಖೇಶ್ ಸಾಹನಿ, "ಒಂದು ಕೊಲೆಗೆ ಕ್ಷಮೆ ಸಿಗುವುದಾದರೆ, ನಾನು ಗುಂಡಿಕ್ಕಿ ಕೊಲ್ಲುವ ಮೊದಲ ವ್ಯಕ್ತಿ ಜ್ಞಾನೇಶ್ ಕುಮಾರ್

2ನೇ ಪುಟಕ್ಕೆ...

## 30 ಸಾವಿರ ಲಂಚ ಸ್ವೀಕರಿಸುತ್ತಿದ್ದ ಕಂದಾಯ ನಿರೀಕ್ಷಕ ಲೋಕಾಯುಕ್ತ ಬಲೆಗೆ!




ತುಮಕೂರು: 30 ಸಾವಿರ ಲಂಚ ಸ್ವೀಕರಿಸುತ್ತಿದ್ದ ವೇಳೆ ಕಂದಾಯ ನಿರೀಕ್ಷಕರೊಬ್ಬರನ್ನು ಲೋಕಾಯುಕ್ತ ಅಧಿಕಾರಿಗಳು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ. ಮಧುಗಿರಿ ಕಸಬಾ ಕಂದಾಯ ನಿರೀಕ್ಷಕ ನಾಗೇಶ್ ಲೋಕಾಯುಕ್ತ ಬಲೆಗೆ ಸಿಕ್ಕಿಬಿದ್ದಿದ್ದಾರೆ. ಮುದ್ದೇನಹಳ್ಳಿ ಗ್ರಾಮದ ರೇಣುಕೇಶ್ ಅವರು ಪೌತಿ ಖಾತೆ ಮಾಡಿಸಲು ಅರ್ಜಿ ಸಲ್ಲಿಸಿದ್ದರು.

ಈ ಕೆಲಸಕ್ಕಾಗಿ ನಾಗೇಶ್ 1 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಮೊದಲ ಕಂತಿನಲ್ಲಿ 35 ಸಾವಿರ ಪಡೆದಿದ್ದ ನಾಗೇಶ್ ಎರಡನೇ ಕಂತಿನ 30 ಸಾವಿರವನ್ನು ಸ್ವೀಕರಿಸುವ ವೇಳೆ ಲೋಕಾಯುಕ್ತ ಎಸ್‌ಪಿ ಮಲ್ಲೇಶ್ ನೇತೃತ್ವದಲ್ಲಿ ದಾಳಿ ನಡೆಸಿದ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರಿದಿದೆ.

## ಸಿದ್ಧಸಿರಿ ಸಾಮಾನ್ಯ ಸಭೆ ಸೆ.27ಕ್ಕೆ

ಬೆಳಗಾವಿ ಸೆ. 24: ನಗರದ ಸಿದ್ಧಸಿರಿ ಮಲ್ಟಿ-ಸ್ಟೇಟ್ ಮಲ್ಟಿ-ಪರ್ಪಸ್ ಕೋ-ಆಪರೇಟಿವ್ ಸೊಸೈಟಿಯ 2025-26ನೇ ಸಾಲಿನ 20ನೇ ವಾರ್ಷಿಕ ಸಾಮಾನ್ಯ ಸಭೆ ಸೆಪ್ಟೆಂಬರ್ 27ರಂದು ಮಧ್ಯಾಹ್ನ 12 ಗಂಟೆಗೆ ನಗರದ ಜ್ಞಾನಯೋಗಾಶ್ರಮ ರಸ್ತೆಯಲ್ಲಿರುವ ಸದಾಶಿವ ನಗರದ ಕಿತ್ತೂರು ರಾಣಿ ಚೆನ್ನಮ್ಮ ಮಂಗಲ ಕಾರ್ಯಾಲಯದಲ್ಲಿ ಸೊಸೈಟಿ ಅಧ್ಯಕ್ಷ ರಾಮನಗೌಡ ಪಾಟೀಲ ಯತ್ನಾಳ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ. ಸಂಸ್ಥಾಪಕ ಅಧ್ಯಕ್ಷರು ಹಾಗೂ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು, ಮುಖಂಡರು, ಹಿತೈಷಿಗಳು ಉಪಸ್ಥಿತವರಿರಲಿದ್ದಾರೆ ಎಂದು ಸೊಸೈಟಿಯ ಮುಖ್ಯ ಕಾರ್ಯ ನಿರ್ವಾಹಕ ಜೊತಿಬಾ ಖಂಡಾಗಳೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಿಯ ಓದುಗರೇ ಅನಂತ ಜನಶಕ್ತಿ ದಿನಪತ್ರಿಕೆಗೆ ಜಾಹೀರಾತು ಮತ್ತು ಸುದ್ದಿ ನೀಡಲು ಇಚ್ಛಿಸುವವರು ಸಂಪರ್ಕಿಸಿ

# 160 ಬಾಂಗ್ಲಾದೇಶಿಗರ ಗಡಿಪಾರು!



ಬೆಂಗಳೂರು: ಬೆಂಗಳೂರು ಮತ್ತು ನೆರೆಯ ಜಿಲ್ಲೆಗಳಲ್ಲಿ ಅಕ್ರಮವಾಗಿ ನೆಲೆಸಿದ್ದ 160 ಬಾಂಗ್ಲಾದೇಶಿ ಪ್ರಜೆಗಳನ್ನು ಕಾನೂನು ಪ್ರಕ್ರಿಯೆಗಳ ನಂತರ ಅವರ ದೇಶಕ್ಕೆ ವಾಪಸ್ ಕಳುಹಿಸಲಾಗಿದೆ. ನಿನ್ನೆ ಗಡೀಪಾರು ಪ್ರಕ್ರಿಯೆ ನಡೆಯಿತು ಎಂದು ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

ಪೊಲೀಸರು ಮತ್ತು ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ ಜಂಟಿಯಾಗಿ ಈ ಕಾರ್ಯಾಚರಣೆಯನ್ನು ನಡೆಸಿದ್ದವು. ಭಾರತೀಯ ವಾಯುಪಡೆಯೊಂದಿಗೆ ಸಮನ್ವಯ ಸಾಧಿಸಿದ ನಂತರ, ಈ ಅಕ್ರಮ ವಲಸಿಗರನ್ನು ವಿಶೇಷ ವಿಮಾನದ ಮೂಲಕ ಬಾಂಗ್ಲಾದೇಶಕ್ಕೆ ವಾಪಸ್ ಕಳುಹಿಸಲಾಯಿತು. ಈಖಿಖಔ ಗಡಿ ಭದ್ರತಾ ಪಡೆಯೊಂದಿಗೆ ಸಮನ್ವಯ ಸಾಧಿಸಿತು ಎಂದು ಅಧಿಕಾರಿ ತಿಳಿಸಿದರು.

ಬೆಳ್ಳಂದೂರು, ಬೇಗೂರು, ವರ್ತೂರು, ಬಂಡೆಪಾಳ್ಯ ಮತ್ತು ಮಾರತಹಳ್ಳಿಯಿಂದ ಇವರನ್ನು ವಶಕ್ಕೆ ಪಡೆಯಲಾಗಿತ್ತು. ಅಲ್ಲದೆ, ಚಿಕ್ಕಮಗಳೂರು ಮತ್ತು ಗದಗ ಜಿಲ್ಲೆಗಳಿಂದ ಇತರ ಏಳು ಮಂದಿಯನ್ನು ವಶಕ್ಕೆ ಪಡೆಯಲಾಗಿತ್ತು ಎಂದು ಪೊಲೀಸರು ಹೇಳಿದರು. ಇವರನ್ನು ಬೆಂಗಳೂರಿನಿಂದ ವಿಮಾನದ ಮೂಲಕ ರಾಷ್ಟ್ರೀಯ ಗಡಿಗೆ

2ನೇ ಪುಟಕ್ಕೆ....

# ಇನ್ನಷ್ಟು ತಾಲೂಕುಗಳು ಬರ ಪ್ರದೇಶ ಘೋಷಣೆ




ಬೆಂಗಳೂರು : ರಾಜ್ಯದಲ್ಲಿ ಬರ ಪರಿಸ್ಥಿತಿಯ ವೈಜ್ಞಾನಿಕ ಮೌಲ್ಯಮಾಪನ ನಿರಂತರವಾಗಿ ನಡೆಯುತ್ತಿದ್ದು, ಈವರೆಗೆ 177 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ ತಿಳಿಸಿದ್ದಾರೆ. ಮಳೆ ಪ್ರಮಾಣ, ಮಣ್ಣಿನ ತೇವಾಂಶ, ಬೆಳೆಗಳ ಸ್ಥಿತಿ ಸೇರಿದಂತೆ ವಿವಿಧ ವೈಜ್ಞಾನಿಕ ಮಾನದಂಡಗಳನ್ನು ಆಧರಿಸಿ ಬರಪೀಡಿತ ತಾಲೂಕುಗಳ ಗುರುತಿಸುವಿಕೆ ಮಾಡಲಾಗುತ್ತಿದೆ.

ಇದರ ಭಾಗವಾಗಿ ಐದನೇ ಹಂತದಲ್ಲಿ 10 ಜಿಲ್ಲೆಗಳ 29 ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಮುಖ್ಯ ಚುನಾವಣಾ ಆಯುಕ್ತರ ವಜಾಕ್ಕೆ ಪ್ರತಿಪಕ್ಷಗಳ ಪಟ್ಟು



ನವದೆಹಲಿ : ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಸಂಬಂಧಿಸಿದಂತೆ ಎದ್ದಿರುವ ಸರಣಿ ಆಕ್ಷೇಪಣೆಗಳು ಹಾಗೂ ಆಂತರಿಕ ಕದನದ ಹಿನ್ನೆಲೆಯಲ್ಲಿ, ಮುಖ್ಯ ಚುನಾವಣೆ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಸಂಸತ್ತಿನ ಉಭಯ ಸದನಗಳಲ್ಲಿ (ಲೋಕಸಭೆ ಮತ್ತು ರಾಜ್ಯಸಭೆ) ದೋಷಾರೋಪ ನಿರ್ಣಯ ಮಂಡಿಸಲು 'ಇಂಡಿಯಾ'ಮೈತ್ರಿಕೂಟ ನಿರ್ಧರಿಸಿದೆ.

ಆಂತರಿಕ ಭಿನ್ನಾಭಿಪ್ರಾಯಗಳು ಹಾಗೂ ನಿಯಮ ಉಲ್ಲಂಘನೆಗಳ ಕುರಿತು ಮಾಧ್ಯಮಗಳು ವರದಿ ಮಾಡಿದ ಮರುದಿನವೇ ಈ ರಾಜಕೀಯ ಬೆಳವಣಿಗೆಯಾಗಿದ್ದು, ಮುಂದಿನ ಕೆಲವೇ ದಿನಗಳಲ್ಲಿ ಇದರ ಕರಡನ್ನು ಸಂಸತ್ತಿನಲ್ಲಿ ಮಂಡಿಸಲಾಗುವುದು ಎಂದು ರಾಜಕೀಯ ಮೂಲಗಳು ಖಚಿತಪಡಿಸಿವೆ.

ಈ ವಿಚಾರವನ್ನು ಬೀದಿಗೆ ತರಲು

4ನೇ ಪುಟಕ್ಕೆ...

# ಸೌಜನ್ಯ ಕೊಲೆ ಕೇಸ್: ಡಿಐಜಿ ಶಶಿಕುಮಾರ್ ನೇತೃತ್ವದಲ್ಲಿ ಎಸ್‌ಐಟಿ ರಚನೆ

ಬೆಂಗಳೂರು : : ಧರ್ಮಸ್ಥಳದ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಕುರಿತು ಮರು ತನಿಖೆ ನಡೆಸುವಂತೆ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ಹೊರಡಿಸಿದ್ದು, ಮೂರು ತಿಂಗಳಲ್ಲೇ ವರದಿ ನೀಡುವಂತೆ ಸೂಚಿಸಿದೆ. ಸುಪ್ರೀಂಕೋರ್ಟ್ ಆದೇಶದ ಬೆನ್ನಲ್ಲೇ ಇಂದು (ಸೆಪ್ಟೆಂಬರ್ 24) ರಾಜ್ಯ ಸರ್ಕಾರ ಎಸ್‌ಐಟಿ ತಂಡವನ್ನು ರಚಿಸಿ ಆದೇಶ ಹೊರಡಿಸಿದೆ. ಎನ್.ಶಶಿಕುಮಾರ್



ನೇತೃತ್ವದಲ್ಲಿ ಮಂಗಳೂರು ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ, ಖಕಖ ಅಧಿಕಾರಿಗಳಾದ ನಿಶಾ ಜೇಮ್ಸ್, ಲೋಕೇಶ್ ಜಗಲಸಾರ್, ವೆಂಕಟೇಶ್ ಪ್ರಸನ್ನ ಒಳಗೊಂಡ ವಿಶೇಷ ತನಿಖಾ ತಂಡವನ್ನು ರಚಿಸಲಾಗಿದೆ. 14 ವರ್ಷಗಳ ಹಿಂದೆ ಧರ್ಮಸ್ಥಳದಲ್ಲಿ ನಡೆದ ವಿದ್ಯಾರ್ಥಿನಿ ಸೌಜನ್ಯ ನಿಗೂಢ ಸಾವು ಪ್ರಕರಣದ ಮರು

2ನೇ ಪುಟಕ್ಕೆ...

# ವಿದ್ಯಾರ್ಥಿಗಳು ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು: ಪ್ರೊ. ನಾಗರಾಜ ಎ

ವಿಜಯಪುರ : ವಿದ್ಯಾರ್ಥಿಗಳು ಶೈಕ್ಷಣಿಕ ಅವಧಿಯಲ್ಲಿಯೇ ಸೇವಾ ಮನೋಭಾವವನ್ನು ಬೆಳೆಸಿಕೊಂಡು ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಪ್ರೊ. ನಾಗರಾಜ ಎ. ಕರೆ ನೀಡಿದರು.

ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) 1969ರಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಜನ್ಮ ಶತಮಾನೋತ್ಸವದ ಸ್ಮರಣಾರ್ಥವಾಗಿ ಡಾ. ವಿ.ಕೆ.ಆರ್.ವಿ. ರಾವ್ ಅವರಿಂದ




ಸ್ಥಾಪಿಸಲಾಯಿತು.

ಸಾಮಾಜಿಕ ಜಾಗೃತಿ, ಸಮುದಾಯ ಸೇವೆ, ಸ್ವಚ್ಛತೆ, ಆರೋಗ್ಯ,

2ನೇ ಪುಟಕ್ಕೆ...

## ಮುಗಳಖೋಡ ಬಸ್ ನಿಲ್ದಾಣ ಅವ್ಯವಸ್ಥೆ; ಸಾರ್ವಜನಿಕರ ಆಕ್ರೋಶ



ಮುಗಳಖೋಡ : ಪಟ್ಟಣದ ಬಸ್ ನಿಲ್ದಾಣದಲ್ಲಿ ಮೂಲಸೌಲಭ್ಯಗಳ ಕೊರತೆ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟುಮಾಡಿದ್ದು, ರಾತ್ರಿ ವೇಳೆ ಬಸ್ ನಿಲ್ದಾಣ ಕತ್ತಲಲ್ಲಿ ಮುಳುಗುವಂತಾಗಿದೆ.

ಕಳೆದ ಮೂರು-ನಾಲ್ಕು ತಿಂಗಳಿಂದ ಬಸ್ ನಿಲ್ದಾಣದ ಸಮಸ್ಯೆಗಳ ಕುರಿತು ಪುರಸಭೆ ಮುಖ್ಯಾಧಿಕಾರಿಗಳಿಗೆ ಹಲವು ಸಂಘಟನೆಗಳು ಮನವಿ ಸಲ್ಲಿಸಿದ್ದರೂ ಯಾವುದೇ ಸಮರ್ಪಕ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಹಲವು ಬಾರಿ ಜನಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೂ ಸಮಸ್ಯೆಗಳನ್ನು ತಂದರೂ ಬಸ್ ನಿಲ್ದಾಣದತ್ತ ಗಮನ ಹರಿಸದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಬಸ್ ನಿಲ್ದಾಣದ ಸಮೀಪ ಶೌಚಾಲಯವಿದ್ದರೂ ಸಮರ್ಪಕ ನಿರ್ವಹಣೆ ಇಲ್ಲದ ಕಾರಣ ಸಾರ್ವಜನಿಕರು ಅನಿವಾರ್ಯವಾಗಿ ಬಯಲು ಪ್ರದೇಶವನ್ನು ಅವಲಂಬಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯದ ಬಗ್ಗೆಯೂ ಆತಂಕ ವ್ಯಕ್ತವಾಗಿದೆ.

ಬಸ್ ನಿಲ್ದಾಣದಲ್ಲಿ ಬೆಳಕಿನ ವ್ಯವಸ್ಥೆ, ಸ್ವಚ್ಛತೆ, ಸೊಳ್ಳೆ ನಿಯಂತ್ರಣ ಹಾಗೂ ಶುದ್ಧ ಕುಡಿಯುವ ನೀರಿನಂತಹ ಮೂಲಸೌಲಭ್ಯಗಳನ್ನು ಕಲ್ಪಿಸುವಂತೆ ಬೆಳಗಾವಿ ಪಿಡಿಒ ಅವರ ಗಮನಕ್ಕೂ ತರಲಾಗಿದ್ದರೂ ಸ್ಪಂದನೆ ದೊರೆತಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ.

2ನೇ ಪುಟಕ್ಕೆ....

## ಒಂದನೇ ಪುಟದಿಂದ...

### ಬರದಿಂದ ತತ್ತರಿಸಿರುವ ರೈತರಿಗೆ 2,500 ಆರ್ಥಿಕ ನೆರವು:

# ಬ್ಯಾಂಕ್ ಖಾತೆಗಳಿಗೆ ನೇರ ಜಮೆ!

ತೊಂದರೆಗೊಳಗಾಗಿರುವ ರೈತರಿಗೆ ಸರ್ಕಾರದ ಕಡೆಯಿಂದ ತಾತ್ಕಾಲಿಕ ಸಾಂತ್ವನದ ನೆರವಾಗಲಿದೆ .ಸದ್ಯ, 40 ಲಕ್ಷ ರೈತರಿಗೆ ಹಣ ಜಮೆಯಾಗಲಿದ್ದು, ಆರಂಭಿಕ ಹಂತದಲ್ಲಿ ಸರ್ಕಾರ 2500 ರೂ ಜಮೆ ಮಾಡಲಿದೆ.

ಕೇಂದ್ರದಿಂದ ಹಣಕಾಸಿನ ನೆರವು ಬಂದ ಬಳಿಕ ಮತ್ತೆ ಸರ್ಕಾರ ಹಣ ಹಾಕಲಿದೆ. ರಾಜ್ಯ ಸರ್ಕಾರದಿಂದ 2,500 ನೆರವು ನೀಡಿದ ಬಳಿಕ ಕೇಂದ್ರ ಸರ್ಕಾರದಿಂದ ಬರ ಪರಿಹಾರದ ಹಣ ಬಿಡುಗಡೆಯಾದರೆ, ನಿಯಮಾನುಸಾರ ರೈತರಿಗೆ ಮತ್ತಷ್ಟು ಪರಿಹಾರ ನೀಡುವ ಸಾಧ್ಯತೆಯ ಬಗ್ಗೆಯೂ ಚರ್ಚೆ ನಡೆದಿದೆ ಎನ್ನಲಾಗಿದೆ. ಈ ಪ್ರಸ್ತಾವನೆಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲು ಸರ್ಕಾರ ನಿರ್ಧರಿಸಿದೆ ಎಂದು ತಿಳಿದುಬಂದಿದೆ. ಸಂಪುಟದ ಒಪ್ಪಿಗೆ ದೊರೆತ ಬಳಿಕ ಅರ್ಹ ರೈತರ ಸಂಖ್ಯೆ, ಹಣಕಾಸಿನ ಒಟ್ಟು ಹೊರೆ ಹಾಗೂ ಹಣ ಜಮಾ ಮಾಡುವ ಪ್ರಕ್ರಿಯೆ ಸೇರಿದಂತೆ ವಿವರಗಳನ್ನು ಸರ್ಕಾರ ಪ್ರಕಟಿಸುವ ಸಾಧ್ಯತೆ ಇದೆ.

# ತ.ನಾಡಿಗೆ 4 ಸಾವಿರ ಕ್ಯೂಸೆಕ್ ನೀರು

ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಇದೇ 15ರಂದು ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿ, 'ಕಾವೇರಿ ಜಲಾನಯನ ಪ್ರದೇಶದ ನಾಲ್ಕು ಜಲಾಶಯಗಳಲ್ಲಿ ಪ್ರಸ್ತುತ 55 ಟಿಎಂಸಿ ಅಡಿ ನೀರಿದೆ. ಕಳೆದೊಂದು ತಿಂಗಳಲ್ಲಿ ಜಲಾಶಯಗಳಿಗೆ ಒಳಹರಿವು ಪ್ರಮಾಣ ಶೇ 87ರಷ್ಟು ಕಡಿಮೆ ಆಗಿದೆ. ಪ್ರಸ್ತುತ ಒಳಹರಿವು ಪ್ರಮಾಣ ಕೇವಲ 3 ಸಾವಿರ ಕ್ಯುಸೆಕ್‌ಗಳಷ್ಟು ಇದೆ' ಎಂದು ಗಮನ ಸೆಳೆದಿದ್ದರು.

# 160 ಬಾಂಗ್ಲಾದೇಶಿಗರ ಗಡಿಪಾರು!

ಕರೆದೊಯ್ಯಲಾಯಿತು. ಅಲ್ಲಿ ಗಡಿ ಭದ್ರತಾ ಪಡೆಗೆ (ಃಖಈ) ಹಸ್ತಾಂತರಿಸಲಾಯಿತು ಎಂದು ಬಾಂಗ್ಲಾದೇಶಕ್ಕೆ ವಾಪಸ್ ಕಳುಹಿಸಲಾಯಿತು. ಗಡಿ ಭದ್ರತಾ ಪಡೆಯೊಂದಿಗೆ ಸಮನ್ವಯ ಸಾಧಿಸಿತು ಎಂದು ಅಧಿಕಾರಿ ತಿಳಿಸಿದರು.

ಬೆಳ್ಳಂದೂರು, ಬೇಗೂರು, ವರ್ತೂರು, ಬಂಡೆಪಾಳ್ಯ ಮತ್ತು ಮಾರತಹಳ್ಳಿಯಿಂದ ಇವರನ್ನು ವಶಕ್ಕೆ ಪಡೆಯಲಾಗಿತ್ತು. ಅಲ್ಲದೆ, ಚಿಕ್ಕಮಗಳೂರು ಮತ್ತು ಗದಗ ಜಿಲ್ಲೆಗಳಿಂದ ಇತರ ಏಳು ಮಂದಿಯನ್ನು ವಶಕ್ಕೆ ಪಡೆಯಲಾಗಿತ್ತು ಎಂದು ಪೊಲೀಸರು ಹೇಳಿದರು. ಇವರನ್ನು ಬೆಂಗಳೂರಿನಿಂದ ವಿಮಾನದ ಮೂಲಕ ರಾಷ್ಟ್ರೀಯ ಗಡಿಗೆ ಕರೆದೊಯ್ಯಲಾಯಿತು. ಅಲ್ಲಿ ಗಡಿ ಭದ್ರತಾ ಪಡೆಗೆ ಹಸ್ತಾಂತರಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದರು. ಕರ್ನಾಟಕದಲ್ಲಿ ಅದರಲ್ಲೂ ವಿಶೇಷವಾಗಿ ಬೆಂಗಳೂರಿನ ಪ್ರಮುಖ ಪ್ರದೇಶಗಳಲ್ಲಿ ಬಾಂಗ್ಲಾದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಿರುವ ಬಗ್ಗೆ ಪದೇ ಪದೇ ದೂರುಗಳು ಬಂದ ಹಿನ್ನೆಲೆಯಲ್ಲಿ, ಪೊಲೀಸರು ಶೆಡ್‌ಗಳು ಮತ್ತು ಶಿಬಿರಗಳು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಪರಿಶೀಲನಾ ಕಾರ್ಯಾಚರಣೆಗಳನ್ನು ನಡೆಸಿದರು. ಮಾನ್ಯ ದಾಖಲೆಗಳಿಲ್ಲದ ವಿದೇಶಿ ಪ್ರಜೆಗಳೆಂದು ಕಂಡುಬಂದವರನ್ನು ಮೊದಲು ಬಂಧನ ಕೇಂದ್ರಗಳಿಗೆ ಕಳುಹಿಸಲಾಯಿತು. ಕಾನೂನು ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ಅವರನ್ನು ವಾಪಸ್ ಕಳುಹಿಸಲಾಯಿತು ಎಂದು ಅಧಿಕಾರಿ ಹೇಳಿದರು. ವಾಪಸ್ ಕಳುಹಿಸಲಾದವರು ದೇಶಕ್ಕೆ ಮತ್ತೆ ಅಕ್ರಮವಾಗಿ ಮರಳದಂತೆ ಖಚಿತಪಡಿಸಿಕೊಳ್ಳುವುದೂ ಈ ಕಾರ್ಯಾಚರಣೆಯ ಭಾಗವಾಗಿದೆ ಎಂದು ಪೊಲೀಸರು ತಿಳಿಸಿದರು. ಎಲೆಕ್ಟ್ರಾನಿಕ್ ಸಿಟಿ ವಿಭಾಗದ ಪೊಲೀಸರು ಇತ್ತೀಚೆಗಷ್ಟೇ 31 ಬಾಂಗ್ಲಾದೇಶಿ ಪ್ರಜೆಗಳನ್ನು ಕೋಲ್ಕತ್ತಾ ಮೂಲಕ ವಾಪಸ್ ಕಳುಹಿಸಿದ್ದರು ಎಂದು ಅವರು ಹೇಳಿದರು.

# 'ಹಿಂದುತ್ವ ಯಾರ ವಿರುದ್ಧವೂ ಅಲ್ಲ; ಉಪರಾಷ್ಟ್ರಪತಿ ರಾಧಾಕೃಷ್ಣನ್

ಆದರೆ ಪ್ರತಿಯೊಬ್ಬರಿಗೂ ತಮ್ಮದೇ ಆದ ಹಕ್ಕುಗಳಿರಬೇಕು. ಅವುಗಳನ್ನು ಸಂರಕ್ಷಿಸಬೇಕು. ಇನ್ನೊಬ್ಬರ ಹಕ್ಕುಗಳನ್ನು ಕಸಿದುಕೊಳ್ಳುವಷ್ಟು ಅತಿಯಾದ ಮಹತ್ವಾಕಾಂಕ್ಷೆಯನ್ನು ನಾನು ಹೊಂದಿರಬಾರದು. ಅದು ಹಿಂದುತ್ವವಲ್ಲ, ಅದು ಧರ್ಮವೂ ಅಲ್ಲ ಎಂದು ಹೇಳಿದರು.

1948ರಲ್ಲಿ ಸ್ಥಾಪನೆಯಾದ ವಿವೇಕ್ ವಾರಪತ್ರಿಕೆಯ ದೀರ್ಘ ಇತಿಹಾಸ ಮತ್ತು ಮಹಾರಾಷ್ಟ್ರದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಸಾರ್ವಜನಿಕ ಜೀವನದಲ್ಲಿ ಅದರ ಒಳಗೊಳ್ಳುವಿಕೆಯನ್ನು ಉಲ್ಲೇಖಿಸಿದರು. ಭಾರತೀಯ ಸಂಸ್ಕೃತಿ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ವ್ಯವಹಾರಗಳು ಮತ್ತು ಪ್ರಮುಖ ಸಾಮಾಜಿಕ ವಿಷಯಗಳ ಕುರಿತು ಪುಸ್ತಕಗಳು ಮತ್ತು ಸಂಶೋಧನಾ ಆಧಾರಿತ ಸಾಹಿತ್ಯವನ್ನು ಪ್ರಕಟಿಸುವ ಅದರ ಸಂಪ್ರದಾಯವನ್ನು ಶ್ಲಾಘಿಸಿದರು.

1925ರಲ್ಲಿ ನಾಗ್ಪುರದಲ್ಲಿ ಡಾ. ಕೇಶವ್ ಬಲಿರಾಮ್ ಹೆಡ್ಗೆವಾರ್ ಅವರು ಸ್ಥಾಪಿಸಿದ ರಾಷ್ಟ್ರೀಯ ಸ್ವಯಂಸೇವಕ ಸಂಘವು ತನ್ನ 100ನೇ ವಾರ್ಷಿಕೋತ್ಸವವನ್ನು ಪೂರೈಸುತ್ತಿರುವುದರಿಂದ ಈ ಪುಸ್ತಕದ ಪ್ರಕಟಣೆಯು ಸೂಕ್ತ ಸಮಯದಲ್ಲಿ ಬಂದಿದೆ ಎಂದು ಉಪಾಧ್ಯಕ್ಷರು ಹೇಳಿದರು. ಸಂಘದೊಂದಿಗಿನ ನನ್ನ ಒಡನಾಟ ಬಹಳ ಹಿಂದಿನದು, ಆದ್ದರಿಂದ ಈ ಪುಸ್ತಕದ ಬಿಡುಗಡೆಯಲ್ಲಿ ಭಾಗವಹಿಸುವುದು ನನಗೆ ತುಂಬಾ ಹೆಮ್ಮೆ ಮತ್ತು ಗೌರವದ ವಿಷಯವಾಗಿದೆ ಎಂದು ಹೇಳಿದರು.

ಸಾಂಸ್ಕೃತಿಕ ಹಿಂದುತ್ವವು ಮೂಲ ಮೌಲ್ಯಗಳು, ಸಾಂಸ್ಕೃತಿಕ ಆದರ್ಶಗಳು, ನಿಜವಾದ ಮಾನವ ಸಂಬಂಧಗಳು ಮತ್ತು ಸಾರ್ವತ್ರಿಕ ಕಲ್ಯಾಣದ ಆದರ್ಶಗಳ ಸುಂದರ ಸಂಗಮವಾಗಿದೆ. ಹಿಂದುತ್ವ ಎಂಬ ಪದವು ವಿಭಿನ್ನ ಐತಿಹಾಸಿಕ ಮತ್ತು ಬೌದ್ಧಿಕ ಸಂದರ್ಭಗಳಲ್ಲಿ ವಿಭಿನ್ನ ಅರ್ಥಗಳನ್ನು ಪಡೆದುಕೊಂಡಿದೆ ಮತ್ತು ರಾಜಕೀಯ ಚಿಂತಕರು, ವಿದ್ವಾಂಸರು, ಸಂಘಟನೆಗಳು ಮತ್ತು ವಿಮರ್ಶಕರು ಇದನ್ನು ವಿಭಿನ್ನವಾಗಿ ವ್ಯಾಖ್ಯಾನಿಸಿದ್ದಾರೆ ಎಂದು ಉಪಾಧ್ಯಕ್ಷರು ಹೇಳಿದರು. ಈ ವಿಷಯವನ್ನು ಆಳವಾಗಿ ಅರ್ಥಮಾಡಿಕೊಳ್ಳಲು, ಅದರ ಐತಿಹಾಸಿಕ ವಿಕಸನ, ತಾತ್ವಿಕ ಅಂಶಗಳು ಮತ್ತು ಅದರ ಸುತ್ತಲಿನ ವಿವಿಧ ದೃಷ್ಟಿಕೋನಗಳನ್ನು ಅರ್ಥಮಾಡಿಕೊಳ್ಳುವುದು ಅತ್ಯಗತ್ಯ ಎಂದು ಹೇಳಿದರು.

# ಮುಗಳಖೋಡ ಬಸ್ ನಿಲ್ದಾಣ ಅವ್ಯವಸ್ಥೆ; ಸಾರ್ವಜನಿಕರ ಆಕ್ರೋಶ


ಪುರಸಭೆ ಸಿಬ್ಬಂದಿ ನಿಯಮಿತವಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ ಎಂಬ ಆರೋಪಗಳೂ ಕೇಳಿಬಂದಿವೆ. ಕಚೇರಿಗೆ ತೆರಳಿದಾಗ ಸಂಬಂಧಪಟ್ಟ ಅಧಿಕಾರಿ ಇಲ್ಲದಿರುವುದಾಗಿ ತಿಳಿಸಲಾಗುತ್ತದೆ. ಪತ್ರಕರ್ತರು ದೂರವಾಣಿ ಮೂಲಕ ಅಧಿಕಾರಿಗಳನ್ನು ಸಂಪರ್ಕಿಸಿದಾಗ, "ನಾಳೆ ಮಾಡಿಸಿಕೊಡುತ್ತೇವೆ" ಎಂಬ ಭರವಸೆ ನೀಡಲಾಗುತ್ತಿದ್ದು, ಕಳೆದ ಮೂರು–ನಾಲ್ಕು ತಿಂಗಳಿಂದ ಸಮಸ್ಯೆ ಮುಂದುವರಿದಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಮುಗಳಖೋಡ ಪುರಸಭೆಯ ವಾರ್ಡ್ 3, 4, 5 ಹಾಗೂ 6ರ ಸಾರ್ವಜನಿಕರ ಪರವಾಗಿ ಬೀದಿದೀಪ, ಸೊಳ್ಳೆ ನಿಯಂತ್ರಣ ಮತ್ತು ಶುದ್ಧ ಕುಡಿಯುವ ನೀರು ಸೇರಿದಂತೆ ವಿವಿಧ ಮೂಲಸೌಲಭ್ಯಗಳನ್ನು ಕಲ್ಪಿಸುವಂತೆ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಇನ್ನಾದರೂ ಪುರಸಭೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳುವರೇ ಎಂಬುದನ್ನು ಕಾದು ನೋಡಬೇಕಿದೆ.

ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ
ಓದಿ ಹಾಗೂ ಚಂದಾದಾರರಾಗಿ ಪ್ರೋತ್ಸಾಹಿಸಿ

# ಪ್ರಾಥಮಿಕ ಶಿಕ್ಷಣಕ್ಕೆ ಡಿಜಿಟಲ್ ತಂತ್ರಜ್ಞಾನ ಪೂರಕ: ಪ್ರಭುಕುಮಾರ ಸ್ವಾಮೀಜಿ



ಸಪ್ತಸಾಗರ ವಾರ್ತೆ,ವಿಜಯಪುರ, ಸೆ. 24:

ಅಲಿಯಾಬಾದ್ ಕೆ.ಎಚ್. ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳ ಕಲಿಕೆಗೆ ಪೂರಕವಾಗಿ ಡಿಜಿಟಲ್ ತಂತ್ರಜ್ಞಾನ ಬಳಸುವುದು ಉತ್ತಮ ಸಾಧನವಾಗಿದೆ. ಪ್ರಾಥಮಿಕ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಮಸೂತಿ ಗ್ರಾಮದ ಚಕ್ರವರ್ತಿ ಜಗದ್ಗುರು ಪ್ರಭುಕುಮಾರ ಸ್ವಾಮೀಜಿ ಹೇಳಿದರು.

ಅವರು ಗುರುವಾರ ಅಲಿಯಾಬಾದ್ ಕೆ.ಎಚ್. ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೇಠ ತಪಿದಾಸ ಮತ್ತು ತುಳಸಿದಾಸ ವಜ್ರದಾಸ ಚಾರಿಟೆಬಲ್ ಟ್ರಸ್ಟ್ ವತಿಯಿಂದ □1.50 ಲಕ್ಷ ದೇಣಿಗೆಯಲ್ಲಿ ನೀಡಲಾದ ಡಿಜಿಟಲ್ ಬೋರ್ಡ್ ಉದ್ಘಾಟಿಸಿ ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಕಾಲದಲ್ಲಿ ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿಯೇ ಸಂಪೂರ್ಣ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ಶಿಕ್ಷಣ ನೀಡಬೇಕು. ಈ ನಿಟ್ಟಿನಲ್ಲಿ ಪಾಲಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಸಮನ್ವಯದಿಂದ ಉತ್ತಮ ಕಲಿಕಾ ವಾತಾವರಣ ನಿರ್ಮಿಸಬೇಕು ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ, ಕಲಿಕೆಯಲ್ಲಿ ತಂತ್ರಜ್ಞಾನ ಅಳವಡಿಕೆ ಅತ್ಯವಶ್ಯವಾಗಿದೆ. ದೃಕ್–ಶ್ರವಣ ಮಾಧ್ಯಮದ ಮೂಲಕ ಪಾಠ ಬೋಧಿಸಿದರೆ ಮಕ್ಕಳ ಕಲಿಕೆ ಹೆಚ್ಚು ಪರಿಣಾಮಕಾರಿಯಾಗುತ್ತದೆ. ಶಿಕ್ಷಕರು ದಾನಿಗಳ ನೆರವಿನಿಂದ ಇಂತಹ ಶೈಕ್ಷಣಿಕ ಪರಿಕರಗಳನ್ನು ಸಂಗ್ರಹಿಸಿ ಮಕ್ಕಳ ಭವಿಷ್ಯ ರೂಪಿಸುವ ಕಾರ್ಯಕ್ಕೆ ಸಾಕ್ಷಿಯಾಗಬೇಕು ಎಂದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವಿಜಯಪುರ ಅಧ್ಯಕ್ಷ ಅರ್ಜುನ ಲಮಾಣಿ ಮಾತನಾಡಿ, ಶಾಲೆಯಲ್ಲಿರುವ ಪ್ರತಿಭೆಗಳನ್ನು ಗುರುತಿಸಿ, ಅವರ ಶೈಕ್ಷಣಿಕ ಸಾಮರ್ಥ್ಯ ಬೆಳೆಸಲು ಅಗತ್ಯವಾದ ಪ್ರೋತ್ಸಾಹ ನೀಡಬೇಕು. ಗ್ರಾಮಗಳ ಹಿರಿಯರು ಹಾಗೂ ಶಿಕ್ಷಣ ಪ್ರೇಮಿಗಳು ಶಾಲೆಗಳನ್ನು ದತ್ತು ಪಡೆದು ಗುಣಮಟ್ಟ ಹೆಚ್ಚಿಸುವ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾಗ್ಯವಂತಿ ಆಸ್ಪತ್ರೆಯ ವೈದ್ಯರಾದ ಡಾ. ಕೆ.ಬಿ. ಹಿರೇಮಠ ಅವರಿಗೆ ಗೌರವ ಸಲ್ಲಿಸಲಾಯಿತು. ಟ್ರಸ್ಟ್ ಸಂಯೋಜಕರಾದ ವಿ.ಎಂ. ಸಿಂದಗಿ ದಂಪತಿಯನ್ನು ಸನ್ಮಾನಿಸಲಾಯಿತು.

ಜಿಓಸಿಸಿ ಬ್ಯಾಂಕ್ ನಿರ್ದೇಶಕ ಹಣಮಂತ ಕೊಣದಿ, ಶಿಕ್ಷಕರಾದ ಎಚ್.ಕೆ. ಬೂದಿಹಾಳ, ಬಸವರಾಜ ತಾಳಿಕೋಟಿ, ಎಸ್‌ಡಿಎಂಸಿ ಅಧ್ಯಕ್ಷ ವಿಠೋಬ ಮಾನೆ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕಿ ಶಕುಂತಲಾ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಎ.ಡಿ. ದೊಡಮನಿ ನಿರೂಪಿಸಿದರು. ಶಿಕ್ಷಕಿ ರೇವತಿ ಬೂದಿಹಾಳ, ಸಿ.ಟಿ. ಚವಾಣ್, ರವಿ ಬಜಂತ್ರಿ, ರೇಣುಕಾ ತಳವಾರ, ಭಾರತಿ ಕುಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು.

### ಪಂಚಾಚಾರ್ಯ ಸಹಕಾರಿ ಪತ್ತಿನ ಸಂಘದ 26ನೇ ವಾರ್ಷಿಕ ಸರ್ವಸಾಧಾರಣ ಸಭೆ

# ಬ್ಯಾಂಕ್ ಅಭಿವೃದ್ಧಿಗೆ ಸಮಾಜದ ಸಹಕಾರ ಅಗತ್ಯ: ರಾಮಲಿಂಗಯ್ಯ ಶ್ರೀ



ಸಪ್ತಸಾಗರ ವಾರ್ತೆ,ತಾಳಿಕೋಟೆ, ಸೆ.24:

ಪಟ್ಟಣದ ಶ್ರೀ ಪಂಚಾಚಾರ್ಯ ಸಹಕಾರಿ ಪತ್ತಿನ ಸಂಘ ನಿ.ದ 26ನೇ ವಾರ್ಷಿಕ ಸರ್ವಸಾಧಾರಣ ಸಭೆಯನ್ನು ಚಬನೂರ ಶ್ರೀ ರಾಮಲಿಂಗೇಶ್ವರ ಮಠದ ಧರ್ಮಾಧಿಕಾರಿ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ರಾಮಲಿಂಗಯ್ಯ ಶ್ರೀಗಳು, ಪಂಚಾಚಾರ್ಯ ಬ್ಯಾಂಕ್‌ಗೆ ಸಮಾಜದವರು ಕಳೆದ ಹಲವು ವರ್ಷಗಳಿಂದ ನಿರಂತರವಾಗಿ ನೀಡುತ್ತಿರುವ ಸಹಕಾರದಿಂದ ಬ್ಯಾಂಕ್ ಉತ್ತಮ ಸ್ಥಿತಿಯಲ್ಲಿ ಅಭಿವೃದ್ಧಿ ಸಾಧಿಸಲು ಸಾಧ್ಯವಾಗಿದೆ. ಬ್ಯಾಂಕ್‌ನ ಬೆಳವಣಿಗೆಯಲ್ಲಿ ಪ್ರತಿಯೊಬ್ಬ ಸದಸ್ಯರ ಸಹಕಾರ ಮತ್ತು ಶ್ರಮ ಮಹತ್ವದ್ದಾಗಿದೆ ಎಂದು ಹೇಳಿದರು.

ಬ್ಯಾಂಕ್‌ನ ಆಡಳಿತ ಮಂಡಳಿ ಹಾಗೂ ಪದಾಧಿಕಾರಿಗಳ ನೇತೃತ್ವದಲ್ಲಿ ಸಂಸ್ಥೆ ಉತ್ತಮವಾಗಿ ಮತ್ತು ಲಾಭದಾಯಕವಾಗಿ ಕಾರ್ಯನಿರ್ವಹಿಸುತ್ತಿರುವುದು ಸಂತಸದ ಸಂಗತಿ. ಪ್ರಸಕ್ತ ಸಾಲಿನಲ್ಲಿ ರೂ.82 ಲಕ್ಷಕ್ಕೂ ಅಧಿಕ ಲಾಭಾಂಶದೊಂದಿಗೆ ಬ್ಯಾಂಕ್ ಮುನ್ನಡೆಯುತ್ತಿರುವುದು ಆಡಳಿತ ಮಂಡಳಿ ಹಾಗೂ ಸಿಬ್ಬಂದಿಯ ಪರಿಶ್ರಮಕ್ಕೆ ಸಾಕ್ಷಿಯಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಬ್ಯಾಂಕ್ ಇನ್ನಷ್ಟು ಶಾಖೆಗಳನ್ನು ವಿಸ್ತರಿಸಿ ಹೆಚ್ಚಿನ ಜನರಿಗೆ ಆರ್ಥಿಕ ಸೇವೆಗಳನ್ನು ಒದಗಿಸಬೇಕು. ಬ್ಯಾಂಕ್‌ನ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಎಲ್ಲರಿಗೂ ಪಂಚಾಚಾರ್ಯರ ಕೃಪೆ ದೊರೆಯಲಿ ಎಂದು ಆಶಿಸಿದರು. ಕ್ಷೇತ್ರ ಸಮನ್ವಯ ಅಧಿಕಾರಿ ಆರ್.ಬಿ. ದಮ್ಮೂರಮಠ ಮಾತನಾಡಿ, ಸಮಾಜದವರು ಯಾವುದೇ ಮಾತುಗಳಿಗೆ ಕಿವಿಗೊಡದೆ ಬ್ಯಾಂಕ್‌ನ ಷೇರುಗಳನ್ನು ಪಡೆದು ಸಂಸ್ಥೆಯ ಬೆಳವಣಿಗೆಗೆ ಸಹಕರಿಸುತ್ತಿದ್ದಾರೆ. ಸಮಾಜದಲ್ಲಿನ ಸಂಕಷ್ಟದಲ್ಲಿರುವವರ ನೆರವಿಗೆ ಧಾವಿಸುವ ಮನೋಭಾವವನ್ನು ಮುಂದುವರಿಸಿಕೊಂಡು ಎಲ್ಲರೂ ಒಗ್ಗಟ್ಟಿನಿಂದ ಮುನ್ನಡೆಯಬೇಕು ಎಂದು ಕರೆ ನೀಡಿದರು.

ಸಿಂದಗಿ ಶಾಖಾ ಸಲಹಾ ಸಮಿತಿ ಸದಸ್ಯ ಶಂಕರಯ್ಯ ಬಂದಾಳಮಠ ಮಾತನಾಡಿ, ಸಿಂದಗಿಯಲ್ಲಿ ಪಂಚಾಚಾರ್ಯ ಬ್ಯಾಂಕ್ ಶಾಖೆ ಆರಂಭಿಸಲು ರಾಮಲಿಂಗಯ್ಯ ಸ್ವಾಮೀಜಿಗಳು ಸಾಕಷ್ಟು ಶ್ರಮಿಸಿದ್ದಾರೆ. ಅವರ ಸಲಹೆಯಂತೆ ಸಮಿತಿ ರಚಿಸಿ ಬ್ಯಾಂಕ್‌ನ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ಧಲಿಂಗ ದೇವರು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಬ್ಯಾಂಕ್ ಅಧ್ಯಕ್ಷ ಮುತ್ತುರಾಜ ಜಾಹಾಗೀರದಾರ ಅಧ್ಯಕ್ಷತೆ ವಹಿಸಿದ್ದರು. ಪ್ರಧಾನ ವ್ಯವಸ್ಥಾಪಕ ಶ್ರೀಕಾಂತ ಹಿರೇಮಠ ವಾರ್ಷಿಕ ವರದಿ ಮಂಡಿಸಿದರು. ಶಿವಕುಮಾರ ಹಿರೇಮಠ ವೇದಘೋಷ್ಠಿ ನಡೆಸಿಕೊಟ್ಟರು. ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಬ್ಯಾಂಕ್ ಉಪಾಧ್ಯಕ್ಷ ನಾಗಭೂಷಣ ದೊಣ್ಣೂರಮಠ, ಸಂಸ್ಥಾಪಕ ನಿರ್ದೇಶಕ ಕುಮಾರಸ್ವಾಮಿ ಮಠ, ಬಸಯ್ಯ ಹಿರೇಮಠ, ಸಂಗಯ್ಯ ಕೊಡಗಾನೂರ, ನಿರ್ದೇಶಕರಾದ ಈರಯ್ಯ ಹಿರೇಮಠ, ಚೆನ್ನಯ್ಯ ಹಿರೇಮಠ, ಈರಯ್ಯ ಹಿರೇಮಠ, ಪಂಚಾಕ್ಷರಿ ಹಿರೇಮಠ, ಮಲ್ಲಯ್ಯ ಸಾಲಿಮಠ, ಶ್ರೀಮತಿ ವಿದ್ಯಾ ಮಹಾಂತೇಶ ಮಠ, ರಾಜೇಶ್ವರ ಮಲ್ಲಯ್ಯ ವಿಭೂತಿಮಠ, ಸಮಾಜದ ತಾಲೂಕಾಧ್ಯಕ್ಷ ಶರಣಯ್ಯ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮುಖ್ಯ ಚುನಾವಣಾ ಆಯುಕ್ತರ ವಜಾಕ್ಕೆ ಪ್ರತಿಪಕ್ಷಗಳ ಪಟ್ಟು

1ನೇ ಪುಟದಿಂಧ..

ಕಾಂಗ್ರೆಸ್ ನಿರ್ಧರಿಸಿದ್ದು, ತನ್ನ ಎಲ್ಲಾ ರಾಜ್ಯ ಘಟಕಗಳಿಗೆ ತಕ್ಷಣವೇ ಬೀದಿಗಿಳಿದು ಪ್ರತಿಭಟನೆ ನಡೆಸಲು ನಿರ್ದೇಶನ ನೀಡಿದೆ.

ಸೆಪ್ಟೆಂಬರ್ 25ರಂದು ರಾಜ್ಯ ಕಾಂಗ್ರೆಸ್ ಸಮಿತಿಗಳು (ಪಿಸಿಸಿ) ಆಯಾ ರಾಜ್ಯಗಳ ಚುನಾವಣಾ ಆಯೋಗದ ಕಚೇರಿಗಳಿಗೆ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ನಡೆಸಲಿವೆ. ಸೆಪ್ಟೆಂಬರ್ 28ರಂದು 2ನೇ ಹಂತವಾಗಿ ಎಲ್ಲಾ ಜಿಲ್ಲಾ ಕಾಂಗ್ರೆಸ್ ಸಮಿತಿಗಳು (ಡಿಸಿಸಿ) ಆಯಾ ಜಿಲ್ಲಾಧಿಕಾರಿಗಳ ಕಚೇರಿಗಳ ಎದುರು ಪ್ರತಿಭಟನೆ ಕೈಗೊಳ್ಳಲಿವೆ.

ಇಂದು ಕಾಂಗ್ರೆಸ್ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಮಾತನಾಡಿ, "ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ತಕ್ಷಣವೇ ತಮ್ಮ ಹುದ್ದೆಗೆ ರಾಜೀನಾಮೆ ನೀಡಬೇಕು ಹಾಗೂ ಅವರನ್ನು ತಕ್ಷಣವೇ ಬಂಧಿಸಬೇಕು.

ಅವರ ಅವಧಿಯಲ್ಲಿ ಮತದಾರರ ಪಟ್ಟಿಯಲ್ಲಿ ಮಾಡಲಾದ ಎಲ್ಲಾ ತಿದ್ದುಪಡಿಗಳನ್ನು ಹಿಂಪಡೆದು, ಅವರ ನಿರ್ಧಾರಗಳ ಬಗ್ಗೆ ಸ್ವತಂತ್ರ ತನಿಖೆ ನಡೆಯಬೇಕು. ಸಿಇಸಿ ಹುದ್ದೆಯಿಂದ ಅವರನ್ನು ಕೆಳಗಿಳಿಸಿ, ಜೈಲಿಗೆ ಕಳುಹಿಸುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ." ಎಂದಿದ್ದಾರೆ.

# ಡಿಐಜಿ ಶಶಿಕುಮಾರ್ ನೇತೃತ್ವದಲ್ಲಿ ಎಸ್‌ಐಟಿ ರಚನೆ

1ನೇ ಪುಟದಿಂಧ..

ತನಿಖೆಗೆ ಸುಪ್ರೀಂ ಕೋರ್ಟ್ ಆದೇಶ ಹೊರಡಿದೆ. ತಿಂಗಳ ಹಿಂದೆ ತೀರ್ಪು ಕಾಯ್ದಿರಿಸಿದ್ದ ನ್ಯಾ. ಸಂಜಯ್ ಕುಮಾರ್ ಪೀಠ ಮೊನ್ನೇ ಮಹತ್ವದ ಆದೇಶ ನೀಡಿ–ದ್ದು, 3 ತಿಂಗಳಲ್ಲಿ ತನಿಖೆ ಪೂರ್ಣಗೊಳಿಸಲು ಡೆಡ್‌ಲೈನ್ ನೀಡಿದೆ. ಅಲ್ಲದೇ ಹಿಂದೆ ತನಿಖೆ ನಡೆಸಿದ್ದ ಅಧಿಕಾರಿಗಳನ್ನು ತನಿಖೆಗೆ ಸೇರಿಸದಂತೆ ಹೊಸದಾಗಿ ಪ್ರಕರಣದ ತನಿಖೆಗೆ ಸುಪ್ರೀಂ ಸೂಚನೆ ನೀಡಿದ್ದು, ತನಿಖಾ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು ಎಂದು ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಈ ಆದೇಶದ ಮೂಲಕ ಸೌಜನ್ಯ ಕೊಲೆ ಪ್ರಕರಣದ ತನಿಖೆಗೆ ಹೊಸ ತಿರುವು ಸಿಕ್ಕಂತಾಗಿದ್ದು, ಆರೋಪಿಗಳನ್ನ ಪತ್ತೆ ಹಚ್ಚುವ ನಿರೀಕ್ಷೆ ಮತ್ತೆ ಮೂಡಿದೆ.

ಉಜಿರೆಯ ಎಸ್‌ಡಿಎಂ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯಾಗಿದ್ದ 17 ವರ್ಷದ ಸೌಜನ್ಯ, ಕಾಲೇಜಿನಿಂದ ಮನೆಗೆ ಹಿಂದಿರುಗುತ್ತಿದ್ದಾಗ ನಾಪತ್ತೆಯಾದಳು. ಅಕ್ಟೋಬರ್ 10, 2012: ಧರ್ಮಸ್ಥಳದ ಮಣ್ಣಸಂಕ ಎಂಬಲ್ಲಿನ ಪೊದೆಯೊಂದರಲ್ಲಿ ಸೌಜನ್ಯಳ ಅರ್ಧನಗ್ನ ಸ್ಥಿತಿಯಲ್ಲಿದ್ದ ಮೃತದೇಹ ಪತ್ತೆಯಾಗಿತ್ತು.ಆಕೆಯನ್ನು ಅತ್ಯಾಚಾರ ಮಾಡಿ, ಕತ್ತು ಹಿಸುಕಿ ಕೊಲೆ ಮಾಡಲಾಗಿದೆ ಎಂದು ದೂರು ದಾಖಲಾಗಿತ್ತು. ಅಕ್ಟೋಬರ್ 11, 2012: ಸ್ಥಳೀಯ ಪೊಲೀಸರು ಮಾನಸಿಕ ಅಸ್ವಸ್ಥ ಎನ್ನಲಾದ ಸಂತೋಷ್ ರಾವ್ ಎಂಬಾತನನ್ನು ಪ್ರಮುಖ ಆರೋಪಿಯನ್ನಾಗಿ ಬಂಧಿಸಿದ್ರು. ಆದರೆ, ಪ್ರಭಾವಿ ವ್ಯಕ್ತಿಗಳನ್ನು ರಕ್ಷಿಸಲು ಆತನನ್ನು ಬಲಿಪಶು ಮಾಡಲಾಗುತ್ತಿದೆ ಎಂದು ಸೌಜನ್ಯ ಕುಟುಂಬ ಮತ್ತು ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಈ ಬಗ್ಗೆ ಸಾಕಷ್ಟು ಹೋರಾಟ, ಪ್ರತಿಭಟನೆಗಳು ನಡೆದಿವೆ.

ಸಾರ್ವಜನಿಕರ ತೀವ್ರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಪ್ರಕರಣವನ್ನು ಮೊದಲು ರಾಜ್ಯ ಸಿಐಡಿ ತನಿಖೆಗೆ ನೀಡಿತ್ತು. ನಂತರ ತನಿಖೆಯು ತೃಪ್ತಿಕರವಾಗಿಲ್ಲದ ಕಾರಣ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಿದ್ದರು.

# ಸೆ.27ಕ್ಕೆ ಸಾಹಿತ್ಯ ಬಳಗ ಉದ್ಘಾಟನೆ

ಸಪ್ತಸಾಗರ ವಾರ್ತೆ,ವಿಜಯಪುರ, ಸೆ. 24:

ಜಿಲ್ಲೆಯ ಮನಗೂಳಿ ಪಟ್ಟಣದ ಸೋಮೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಸೆ.27ರಂದು ಬೆಳಿಗ್ಗೆ 11 ಗಂಟೆಗೆ ಮಾಣಿಕ್ಯವಳ್ಳಿ ಸಾಹಿತ್ಯ ಬಳಗದ ಉದ್ಘಾಟನೆ, ಪದಗ್ರಹಣ, ಸಾಹಿತಿ ಮುರುಗೇಶ ಸಂಗಮ ಅವರ ಬಸವ ಜನ್ಮಸ್ಥಳ ಬಸವನಬಾಗೇವಾಡಿ ಕ್ಷೇತ್ರ ಚರಿತ್ರೆ ಕೃತಿಗೆ ಪುಸ್ತಕ ಪ್ರಶಸ್ತಿ ಪ್ರದಾನ, ಕವಿಗೋಷ್ಠಿ ಹಾಗೂ ಸನ್ಮಾನ ಸಮಾರಂಭ ನಡೆಯಲಿದೆ. ಮನಗೂಳಿಯ ಬಸವೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಸೋಮನಗೌಡ (ಅಪ್ಪುಗೌಡ) ಪಾಟೀಲ ಅಧ್ಯಕ್ಷತೆ ವಹಿಸುವರು. ಹಿರಿಯ ಸಾಹಿತಿ ಸಿದ್ಧಲಿಂಗ ಮನಹಳ್ಳಿ ಉದ್ಘಾಟಿಸುವರು. ವಿಜಯಪುರ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ವಿಶ್ವನಾಥಗೌಡ ಪಾಟೀಲ, ಗಲಗಲಿಯ ನಂದಿ ಶುಗರ್ ಸಹಕಾರಿ ಸಕ್ಕರೆ ಕಾರ್ಖಾನೆಯ ಮಾಜಿ ನಿರ್ದೇಶಕ ರೇವಣಸಿದ್ಧ ಮಣೂರ ಹಾಗೂ ಸಮಾಜಸೇವಕ ಶಿವನಗೌಡ ಗುಜಗೊಂಡ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಸಾಹಿತಿ ಮುರುಗೇಶ ಸಂಗಮ ಹಾಗೂ ಬಳಗದ ಅಧ್ಯಕ್ಷ ಶಿವಾಜಿ ಮೋರೆ ಉಪಸ್ಥಿತರಿರುವರು. ಆರ್.ಎಂ. ಅಭ್ಯುದಯ ಫೌಂಡೇಶನ್ ಅಧ್ಯಕ್ಷ ಮಹೇಶ ಪಿರಗಾ ಅವರನ್ನು ಸನ್ಮಾನಿಸಲಾಗುವುದು ಎಂದು ಮಾಣಿಕ್ಯವಳ್ಳಿ ಸಾಹಿತ್ಯ ಬಳಗದ ಅಧ್ಯಕ್ಷ ಶಿವಾಜಿ ಮೋರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಿಂಗಳಲ್ಲಿ 10 ದಿನ ಕರ ವಸೂಲಿಗೆ ಸೂಚನೆ



ಕನಕಗಿರಿ: 'ಪಟ್ಟಣದ ಮನೆ, ವಾಣಿಜ್ಯ ಮಳಿಗೆಗಳ ಮಾಲೀಕರು ಬಾಕಿ ಉಳಿಸಿಕೊಂಡಿರುವ ತೆರಿಗೆಯನ್ನು ವಸೂಲಿ ಮಾಡಲು ಕರ ವಸೂಲಿ ಅಭಿಯಾನ ಆಯೋಜಿಸಲಾಗಿದೆ' ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಕೆ.ರಾಜಶೇಖರ ತಿಳಿಸಿದರು.

ಪಟ್ಟಣದ ವಿವಿಧ ವಾಣಿಜ್ಯ ಮಳಿಗೆಗಳಿಗೆ ಅವರು ದಿಢೀರ್ ಭೇಟಿ ನೀಡಿದರು. ಬಳಿಕ ಮಾತನಾಡಿದ ಅವರು, 'ತಿಂಗಳಲ್ಲಿ 10 ದಿನ ಪ.ಪಂ ಸಿಬ್ಬಂದಿ ಮನೆ, ವಾಣಿಜ್ಯ ಮಳಿಗೆಗೆ ಕರ ತೆರಳಿ ವಸೂಲಿ ಮಾಡಬೇಕು, ಮಾಲೀಕರು ತೆರಿಗೆ ಪಾವತಿ ಜತೆಗೆ ಸ್ವಚ್ಛತೆ ಕಾಪಾಡಬೇಕು. ಕಡ್ಡಾಯವಾಗಿ ಪರವಾನಗಿ ಪಡೆದುಕೊಂಡು ಪ್ರತಿವರ್ಷ ಚಾಲ್ತಿಯಲ್ಲಿಟ್ಟುಕೊಳ್ಳಬೇಕು' ಎಂದು ಹೇಳಿದರು.

'ಸಾರ್ವಜನಿಕರು, ಹೋಟೆಲ್ ಇತ-ರೆ ಅಂಗಡಿಗಳ ಮಾಲೀಕರು ಎಲ್ಲೆಡೆ ಕಸ ಬಿಸಾಕಬಾರದು, ಪಂಚಾಯಿತಿ ವಾಹನಗಳಲ್ಲಿ ಹಾಕಬೇಕು. ತೆರಿಗೆ ಬಾಕಿ ಉಳಿಸಿಕೊಂಡ ಮಾಲೀಕರು ಸಕಾಲದಲ್ಲಿ ಕಟ್ಟದಿದ್ದರೆ ಕಾನೂನು ಪ್ರಕಾರ ಕ್ರಮ ವಸೂಲಿ ಮಾಡಲಾಗುವುದು' ಎಂದು ಎಚ್ಚರಿಕೆ ನೀಡಿದರು.

ಕಂದಾಯ ನಿರೀಕ್ಷಕ ಕನಕಪ್ಪ ನಾಯಕ, ಕರ ವಸೂಲಿಗಾರ ಕೇಶವ, ಸಿಬ್ಬಂದಿ ನಜೀರಸಾಬ, ಹುಲ್ಲೇಶ ಇತರರು ಇದ್ದರು.

# ಪೌರಕಾರ್ಮಿಕರು 'ಪರಿಸರ ಪುತ್ರರು' ಎಂದು ಗೌರವಿಸಬೇಕು: ಶಂಕರ್



ಹನುಮಸಾಗರ: 'ಪಟ್ಟಣದ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಸೇವೆ ಅನನ್ಯವಾಗಿದ್ದು, ಅವರ ನಿರಂತರ ಶ್ರಮದಿಂದ ಆರೋಗ್ಯಕರ ಪರಿಸರ ನಿರ್ಮಾಣವಾಗುತ್ತಿದೆ' ಎಂದು ಸಂಪನ್ಮೂಲ ವ್ಯಕ್ತಿ ಶಂಕರ್ ಹೇಳಿದರು.

ಪಟ್ಟಣ ಪಂಚಾಯಿತಿ ವತಿಯಿಂದ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, 'ಪೌರಕಾರ್ಮಿಕರನ್ನು ಕೇವಲ ಕಾರ್ಮಿಕರೆಂದು ಪರಿಗಣಿಸದೆ 'ಪರಿಸರ ಪುತ್ರರು' ಎಂದು ಗೌರವಿಸಬೇಕು' ಎಂದರು.

'ಗುತ್ತಿಗೆ ಆಧಾರದಲ್ಲಿರುವ ಪೌರಕಾರ್ಮಿಕರನ್ನು ಕಾಯಂಗೊಳಿಸುವುದು, ಅವರ ಮಕ್ಕಳ ಉನ್ನತ ಶಿಕ್ಷಣಕ್ಕೆ ನೆರವು ನೀಡುವುದು, ಆರೋಗ್ಯ ಮತ್ತು ವಸತಿ ಸೌಲಭ್ಯ ಕಲ್ಪಿಸುವುದು, ಕರ್ತವ್ಯದಲ್ಲಿರುವಾಗ ಮೃತಪಟ್ಟ ಪೌರಕಾರ್ಮಿಕರಿಗೆ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಿಸುವ ವ್ಯವಸ್ಥೆ ಸರ್ಕಾರ ಕಲ್ಪಿಸಬೇಕು' ಎಂದು ಒತ್ತಾಯಿಸಿದರು.

ವೆಂಕಟೇಶ್ ಹೊಸಮನಿ ಮಾತನಾಡಿ, 'ಪ್ರತಿನಿತ್ಯ ಪಟ್ಟಣದ ಸ್ವಚ್ಛತೆ, ಆರೋಗ್ಯ ರಕ್ಷಣೆಗೆ ಕೊಡುಗೆ ನೀಡುತ್ತಿರುವ ಪೌರಕಾರ್ಮಿಕರ ಬದುಕು ನಿರ್ಲಕ್ಷ್ಯ-ಕ್ಕೆ ಒಳಗಾಗುತ್ತಿದೆ. ಸ್ವಚ್ಛತೆಗಾಗಿ ಶ್ರಮಿಸುವ ಪೌರಕಾರ್ಮಿಕರಿಗೆ ಸಮರ್ಪಕ ವೇತನ, ಸುರಕ್ಷತಾ ಸೌಲಭ್ಯ, ಅಗತ್ಯ ಮೂಲಸೌಕರ್ಯ ಹಾಗೂ ಸಾಮಾಜಿಕ ಗೌರವ ದೊರೆಯಬೇಕು' ಎಂದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ರೆಡ್ಡಿ ರಾಯನಗೌಡ ಮಾತನಾಡಿ, 'ಪೌರಕಾರ್ಮಿಕರು ಪ್ರತಿದಿನ ಪಟ್ಟಣದ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುತ್ತಿದ್ದಾರೆ. ಸಾರ್ವಜನಿಕ ಆರೋಗ್ಯ ರಕ್ಷಣೆಯಲ್ಲಿ ಅವರ ಸೇವೆ ಮಹತ್ವದ್ದಾಗಿದೆ' ಎಂದರು.

ಪೌರಕಾರ್ಮಿಕರ ವೇತನ ಹಾಗೂ ಸೇವಾ ಸೌಲಭ್ಯಗಳಿಗೆ ಸಂಬಂಧಿಸಿದ ಅಗತ್ಯ ಪ್ರಸ್ತಾವಗಳನ್ನು ಜಿಲ್ಲಾಧಿಕಾರಿ ಕಚೇರಿಗೆ ಸಲ್ಲಿಸಲಾಗಿದೆ. ಪ್ರಸ್ತಾವ ಶೀಘ್ರ ಸರ್ಕಾರದ ಗಮನಕ್ಕೆ ತಲುಪುವ ನಿರೀಕ್ಷೆಯಿದ್ದು, ವೇತನ ಪಾವತಿ ಹಾಗೂ ಬಾಕಿ ಸೌಲಭ್ಯಗಳನ್ನು ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು' ಎಂದು ಭರವಸೆ ನೀಡಿದರು.

ವಿಜಯ ಮಹಾಂತೇಶ ಕುಷ್ಟಗಿ ಹಾಗೂ ಏಕನಾಥ ಮೇದಿಕರಿ ಮಾತನಾಡಿದರು. ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು.

ಎಪಿಎಂಸಿ ಮಾಜಿ ಅಧ್ಯಕ್ಷ ಹನುಮಂತ ಬಿಂಗಿ, ರಮೇಶ್ ಬಡಿಗೇರ, ಶೈಲಪ್ಪ ಮೋಟಗಿ, ಶಿವಪ್ಪ ಕಂಪ್ಲಿ, ಮೌಲಾಸಾಬ ಮೋಟಗಿ, ಮರೇಗೌಡ, ಹನುಮೇಶ್, ಸೂಚಪ್ಪ ದೇವರಮನಿ, ಮೈನುದ್ದೀನ್ ಖಾಜಿ, ಚಂದ್ರಶೇಖರ, ಮಾರುತಿ ರಂಗ-ರೇಜ್, ಬಾಳಪ್ಪ ಹಿರೇಮನಿ, ಎಸ್‌ಎಸ್‌ಕೆ ಸಮಾಜದ ಮುಖಂಡರಾದ ಅಂಬಾಸ ರಂಗ-ರೇಜ್, ಮಂಜುನಾಥ ಹುಲ್ಲೂರು, ಮಹಾಂತಯ್ಯ ಕೋಮಾರಿ, ವಿರೇಶ ಕುರನಾಳ, ಬಸವರಾಜ, ಚಂದಪ್ಪ, ಮಂಗಳೇಶ, ಹಲವರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ಪ್ರಕ್ರಿಯೆ ನಿಖರವಾಗಿರಲಿ – ವಿಪುಲ್ ಬನ್ಸಲ್



ಗದಗ: 'ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಅತ್ಯಂತ ನಿಖರ ಮತ್ತು ಪಾರದರ್ಶಕವಾಗಿ ನಿರ್ವಹಿಸಬೇಕು' ಎಂದು ಜಿಲ್ಲಾ ಮತದಾರರ ಪಟ್ಟಿಯ ವೀಕ್ಷಕ ವಿಪುಲ್ ಬನ್ಸಲ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. 'ಪ್ರತಿಯೊಬ್ಬ ಅರ್ಹ ನಾಗರಿಕ, ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವುದು ಪ್ರಜಾಪ್ರಭುತ್ವದ ಮೂಲ ಆಶಯ. 18 ವರ್ಷ ತುಂಬಿದ ಯುವಜನರು ಹಾಗೂ ಈವರೆಗೆ ಮತದಾರರ ಪಟ್ಟಿಗೆ ಸೇರ್ಪಡೆಯಾಗದವರನ್ನು ಆದ್ಯತೆಯಾಗಿ ಪರಿಗಣಿಸಬೇಕು' ಎಂದರು.

'ಮತದಾರರ ಪಟ್ಟಿಯಲ್ಲಿರುವ ಹೆಸರು, ವಿಳಾಸ, ಭಾವಚಿತ್ರ ಮುಂತಾದ ತಿದ್ದುಪಡಿಗಳನ್ನು ತ್ವರಿತವಾಗಿ ಪರಿಶೀಲಿಸಿ ಸರಿಪಡಿಸಬೇಕು. ಮೃತಪಟ್ಟ ಮತ್ತು ಸ್ಥಳಾಂತರಗೊಂಡ ಮತದಾರರ ಹೆಸರನ್ನು ನಿಯಮಾನುಸಾರ ತೆಗೆದುಹಾಕಬೇಕು. ಬೂತ್ ಮಟ್ಟದ ಅಧಿಕಾರಿಗಳುಮನೆ ಮನೆಗೆ ಭೇಟಿ ನೀಡಬೇಕು. ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕು' ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, 'ಜಿಲ್ಲೆಯಲ್ಲಿ ಒಟ್ಟು 122 ಗ್ರಾಮ ಪಂಚಾಯಿತಿಗಳಿದ್ದು, ಶಿರಹಟ್ಟಿ, ಗದಗ, ರೋಣ, ನರಗುಂದ ವಿಧಾನಸಭಾ ಕ್ಷೇತ್ರಗಳಿವೆ. ಒಟ್ಟು 353 ಗ್ರಾಮಗಳು ಮತ್ತು 203 ವಾರ್ಡ್‌ಗಳಿವೆ. 983 ಮತಗಟ್ಟೆಗಳಿವೆ, 983 ಹಾಗೂ 97 ಬಿಎಲ್‌ಒ ಮೇಲ್ವಿಚಾರಕರು ಇದ್ದಾರೆ' ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಎಸಿ ಗಂಗಪ್ಪ ಎಂ, ಜಿಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ತಹಶೀಲ್ದಾರ ಶ್ರೀನಿವಾಸ ಮೂರ್ತಿ, ಆಹಾರ ಇಲಾಖೆಯ ಉಪನಿರ್ದೇಶಕ ಎಮ್ ಎಸ್ ಪಾಟೀಲ್, ಚುನಾವಣಾ ಶಾಖೆಯ ತಹಶಿಲ್ದಾರ ಸಂತೋಷ ಹಿರೇಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ನಂದಾ ಹಣಬರಹಟ್ಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ ಎಂ ತುಂಬರಮಟ್ಟಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಇತರ ಅಧಿಕಾರಿಗಳು, ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಜರಿದ್ದರು.

# ಮಕ್ಕಳ ರಕ್ಷಣೆ ಶಿಕ್ಷಕರ ಮೂಲಭೂತ ಕರ್ತವ್ಯ: ಸಿದ್ರಾಮೇಶ್ವರ



ಕೊಪ್ಪಳ: 'ಮಕ್ಕಳ ಮೇಲೆ ಶಿಕ್ಷಕರ ಪ್ರಭಾವ ಹೆಚ್ಚಾಗಿರುತ್ತದೆ. ಚಿಕ್ಕ ಮಕ್ಕಳು ಪೋಷಕರಿಗಿಂತ ಹೆಚ್ಚಾಗಿ ತಮ್ಮ ಶಿಕ್ಷಕರ ಮಾತನ್ನು ಕೇಳುತ್ತಾರೆ. ಸಮಾಜದಲ್ಲಿ ಮಕ್ಕಳನ್ನು ಸುರಕ್ಷಿತವಾಗಿಡುವುದು ಮತ್ತು ರಕ್ಷಿಸುವುದು ಶಿಕ್ಷಕರ ಮೂಲ ಭೂತ ಕರ್ತವ್ಯವಾಗಿದೆ' ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ತಿಳಿಸಿದರು.

ಇಲ್ಲಿನ ಜಿಲ್ಲಾ ಪಂಚಾಯಿತಿ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಬುಧವಾರ ನಡೆದ ಮಕ್ಕಳ ರಕ್ಷಣಾ ನೀತಿ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ತರಬೇತಿಯಲ್ಲಿ ಪಡೆದ ಮಾಹಿತಿ ಯನ್ನು ಶಿಕ್ಷಕರು ತಮ್ಮ ಶಾಲೆಗಳಲ್ಲಿ ಇತರ ಶಿಕ್ಷಕರೊಂದಿಗೆ ಹಂಚಿಕೊಳ್ಳಬೇಕು. ಈ ಕಾರ್ಯಕ್ರಮವು ಕೇವಲ ಪಂಚ ವರ್ಷ ಯೋಜನೆಯಾಗದೆ ತಕ್ಷಣವೇ ಅನುಷ್ಠಾನಗೊಳ್ಳಬೇಕು. ಈ ತರಬೇತಿ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಲು ಶಿಕ್ಷಕರ ಸಕ್ರಿಯ ಭಾಗವಹಿಸುವಿಕೆ ಮತ್ತು ಸಲಹೆ ಸೂಚನೆಗಳು ಅತ್ಯಗತ್ಯ' ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಮಹಾಂತೇಶ ದರಗದ ಮಾತನಾಡಿ, 'ಮಕ್ಕಳ ಒಳ್ಳೆಯ ಭವಿಷ್ಯಕ್ಕಾಗಿ, ಸದುದ್ದೇಶದಿಂದ ಮಾಡುವ ಕೆಲಸಗಳಿಗೆ ಶಿಕ್ಷಕರು ಅಂಜುವ ಅಗತ್ಯವಿಲ್ಲ. ಮಕ್ಕಳ ಸುರಕ್ಷತೆ ಪ್ರತಿಯೊಬ್ಬ ಪೋಷಕರ, ಶಿಕ್ಷಕರ ಹಾಗೂ ಸಮಾಜದ ಜವಾಬ್ದಾರಿಯಾಗಿದ್ದು, ಎಲ್ಲರೂ ಜಾಗೃತಿ ಯಿಂದ ಕಾರ್ಯನಿರ್ವಹಿಸಬೇಕು' ಎಂದು ಕರೆ ನೀಡಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್‌ಕುಮಾರ್ ಎನ್., ಯುನಿಸೆಫ್ ಮಕ್ಕಳ ರಕ್ಷಣಾ ಯೋಜನೆಯ ವಿಭಾಗೀಯ ಸಂಯೋಜಕ ಡಾ.ಕೆ.ರಾಘವೇಂದ್ರ ಭಟ್, ವ್ಯವಸ್ಥಾಪಕ ಹರೀಶ ಜೋಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿಂಧು ಅಂಗಡಿ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಗವಿಸಿದ್ದಪ್ಪ ಹೊಸಮನಿ, ಸತೀಶ್ ಜಿ. ಸೇರಿದಂತೆ ಇತರರು ಇದ್ದರು.

# ಮಾಜಿ ಸಿಎಂ ಸಿದ್ದರಾಮಯ್ಯ ಪ್ರತಿಮೆ ತೆರವು ಖಂಡಿಸಿ ಪ್ರತಿಭಟನೆ




ಗಂಗಾವತಿ: ಕಲಬುರಗಿ ನಗರದ ಹೈಕೋರ್ಟ್ ಕ್ರಾಸ್ ಬಳಿ ಸ್ಥಾಪಿಸಲಾಗಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ 9 ಅಡಿ ಎತ್ತರದ ಪ್ರತಿಮೆ ತೆರವುಗೊಳಿಸಿರುವುದನ್ನು ಖಂಡಿಸಿ ನಗರದ ಕೃಷ್ಣದೇವರಾಯ ವೃತ್ತದಲ್ಲಿ ಹಾಲುಮತ ಸಮಾಜದ ವಯಿತಿಂದ ಬುಧವಾರ ಪ್ರತಿಭಟನೆ ನಡೆಯಿತು.

ಹಾಲುಮತ ಸಮಾಜದ ಮುಖಂಡ ಯಮನಪ್ಪ ವಿಠಲಾಪೂರ ಮಾತನಾಡಿ, 'ಅಹಿಂದ ವರ್ಗದ ಮೂಲಕ ರಾಜ್ಯದ ಜನರ ನಾಯಕರಾದ ಮಾಜಿ ಸಿಎಂ ಸಿದ್ದರಾಮಯ್ಯನವರ ಪ್ರತಿಮೆನ್ನು ಕಲಬುರಗಿ ಹೈಕೋರ್ಟ್ ಕ್ರಾಸ್ ಬಳಿ ಸ್ಥಾಪಿಸಲಾಗಿತ್ತು. ಅಲ್ಲಿನ ಮಹಾನಗರ ಪಾಲಿಕೆ ಪ್ರತಿಮೆ ಪರವಾನಗಿ ಇಲ್ಲದೆ ಪ್ರತಿಷ್ಠಾಪಿಸಲಾಗಿದೆ ಎಂದು ತೆರವುಗೊಳಿಸಿದೆ' ಎಂದು ಹೇಳಿದರು. 'ಹಲವು ದಿನಗಳ ಹಿಂದೆ-ಯೇ ಕಲಬುರಗಿ ಹೈಕೋರ್ಟ್ ಬಳಿಯ ವೃತ್ತಕ್ಕೆ ಸಿದ್ದರಾಮಯ್ಯ ವೃತ್ತ ಎಂದು ನಾಮಕರಣ ಮಾಡಿ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗಿತ್ತು. ಆದರೆ, ಪರವಾನಗಿ ಇಲ್ಲದ ಕಾರಣಕ್ಕೆ ತೆರವು ಮಾಡುವುದು ಸರಿಯಲ್ಲ. ರಾಜ್ಯದ ಜನರ ಮನಸ್ಸು ಗೆದ್ದಿರುವ ಸಿದ್ದರಾಮಯ್ಯನವರಿಗೆ ಅಪಮಾನ ಮಾಡಲಾಗಿದೆ' ಎಂದು ದೂರಿದರು. 'ಮಾಜಿ ಸಿಎಂ ಸಿದ್ದರಾಮಯ್ಯ ಅವರ ಪ್ರತಿಮೆ ತೆರವುಗೊಳಿಸಿರುವುದು ಸಮಾಜದ ಜನರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಕೂಡಲೇ ತೆರವುಗೊಳಿಸಿದ ಪ್ರತಿಮೆ ಪುನರ್‌ಸ್ಥಾಪಿಸಬೇಕು. ಇಲ್ಲವಾದರೆ ರಾಜ್ಯ ಮಟ್ಟದಲ್ಲಿ ಬೃಹತ್ ಹೋರಾಟ ನಡೆಸಲಾಗುವುದು' ಎಂದು ಎಚ್ಚರಿಸಿದರು.

ಪ್ರತಿಭಟನೆಗೂ ಮುನ್ನ ಕೊಪ್ಪಳ ರಸ್ತೆಯಲ್ಲಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಹಾಲುಮತ ಸಮಾಜದ ಮುಖಂಡರು, ಕಾರ್ಯಕರ್ತರು ಬೈಕ್ ರ್‍ಯಾಲಿ ನಡೆಸಿ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಮೂಲಕ ಕೃಷ್ಣದೇವರಾಯ ವೃತ್ತದಲ್ಲಿ ರ್‍ಯಾಲಿ ಅಂತ್ಯಗೊಂಡಿತು. ನಂತರ ಗ್ರೇಡ್-2 ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಹಾಲುಮತ ಸಮಾಜದ ಸಿದ್ರಾಮೇಶ ಸ್ವಾಮೀಜಿ, ಸಣ್ಣಕ್ಕಿ ನೀಲಪ್ಪ, ವ್ಮರಿಯಪ್ಪ ಸಾಲೋಣಿ, ಅಶೋಕಗೌಡ, ಶರಣ ಗೌಡ ಕೆ.ನಾಗೇಶಪ್ಪ, ಕೆ.ವೆಂಕಟೇಶ, ಬಿ.ವೆಂಕಟೇಶ, ಡ್ಯಾಗಿ ದುರುಗೇಶ, ಪರಶುರಾಮ, ತ್ಯಾವರಪ್ಪ, ಧರ್ಮಣ್ಣ, ಶರಣೇಗೌಡ, ಆರ್ಹಾಳ ದುರುಗೇಶ, ಶರಣಪ್ಪ ಸೇರಿದಂತೆ ಸಮಾಜದ ಜನರು ಉಪಸ್ಥಿತರಿದ್ದರು.

# ಪದವಿ ಕಾಲೇಜಿಗೆ ನೂತನ ಕಟ್ಟಡ ನಿರ್ಮಾಣ



ಮುಂಡರಗಿ: 'ವರ್ಷದಿಂದ ವರ್ಷಕ್ಕೆ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಿಕೊಳ್ಳುತ್ತಿರುವ ಕೆ.ಆರ್. ಬೆಲ್ಲದ ಪದವಿ ಕಾಲೇಜಿಗೆ ನೂತನ ಕಟ್ಟಡ ನಿರ್ಮಾಣಕ್ಕೆ ಪ್ರಯತ್ನಿಸಲಾಗುವುದು' ಎಂದು ಅನ್ನದಾನೀಶ್ವರ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಕೆ.ಆರ್. ಬೆಲ್ಲದ ಪದವಿ ಮಹಾವಿದ್ಯಾಲಯದಲ್ಲಿ ಮಂಗಳವಾರ ನಡೆದ ಕಾಲೇಜು ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ ಕಾಲೇಜು ವಾರ್ಷಿಕ ಪತ್ರಿಕೆ ಬಿಡುಗ-ಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

'ದಾನಿಗಳು ಕಟ್ಟಡ ನಿರ್ಮಾಣಕ್ಕೆ ನೆರವಾಗಬೇಕು' ಎಂದು ಕರೆ ನೀಡಿದರು.

ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ನಾಗೇಶ ಹುಬ್ಬಳ್ಳಿ, ಕಾಲೇಜು ಮೇಲ್ವಿಚಾರಣಾ ಸಮಿತಿ ಕಾರ್ಯಾಧ್ಯಕ್ಷ ಆರ್.ಎಲ್. ಪೊಲೀಸಪಾಟೀಲ ಅವರು ನೂತನ ಕಾಲೇಜು ಕಟ್ಟಡ ನಿರ್ಮಾಣಕ್ಕೆ ತಲಾ 1 ಲಕ್ಷ ದೇಣಿಗೆ ನೀಡುವುದಾಗಿ' ಭರವಸೆ ನೀಡಿದರು.

ಎಂ.ಎಸ್.ಹೊಟ್ಟಿನ, ಸಂತೋಷ ಹಿರೇಮಠ, ಆರ್.ಎಚ್. ಜಂಗಣವಾರಿ, ವಿ.ಎಫ್. ಗುಡದಪ್ಪನವರ, ಎಸ್.ಜಿ. ಕಡ್ಡಿ, ವನಜಾಕ್ಷಿ ಭರಮಗೌಡರ, ಸಚಿನ್ ಉಪ್ಪಾರ, ಸಂಗೀತಾ ಮರಳಿ, ಕೆ.ಕೆ. ಉಳ್ಳಾಗಡ್ಡಿ, ಅಜೇಯ ಮುದ್ಲಾಪೂರ, ಆಶಾ.ಬಿ., ಶ್ರೀಕಾಂತ ಭಂಡಾರಿ, ಅಜೀತ ಬನ್ನಿಕೊಪ್ಪ, ಶಂಭು, ಪ್ರವೀಣ ಇದ್ದರು.

# ಗ್ರಾಮೀಣ ಕೃಷಿ ಸಂಸ್ಕೃತಿಯ ಪರಂಪರೆಯ ಜೋಕುಮಾರ ಹುಣ್ಣಿಮೆ



ರಟ್ಟೀಹಳ್ಳಿ: ಉತ್ತರ ಕರ್ನಾಟಕದ ಗ್ರಾಮೀಣ ಕೃಷಿ ಸಂಸ್ಕೃತಿಯ ವಿಶಿಷ್ಟ ಆಚರಣೆಯೇ ಜೋಕುಮಾರ ಸ್ವಾಮಿ ಉತ್ಸವ, ನಾಡಿನ ಪ್ರಮುಖ ಧಾರ್ಮಿಕ ಗಣೇಶ ಚತುರ್ಥಿ ನಂತರ ವಿಶಿಷ್ಟ ಜಾನಪದ ಆಚರಣೆ ಜೋಕುಮಾರಸ್ವಾಮಿ ಹೆಸರಿ ನಲ್ಲಿ ನಡೆಯುತ್ತದೆ. ಗ್ರಾಮೀಣ ಭಾಗದ ಹೆಣ್ಣು ಮಕ್ಕಳು ಮಣ್ಣಿನಿಂದ ರೂಪುಗೊಂಡ ಅಗಲ ಮುಖ, ದೊಡ್ಡ ಕಣ್ಣು, ಹುರಿಮೀಸೆ, ತೆ-ರೆದ ಬಾಯಿ, ತಲೆಗೆ ಪೇಟ ಹಾಗೂ ಬೇವಿನ ಸೊಪ್ಪಿನಿಂದ ಅಲಂಕರಿಸಿದ ಜೋಕುಮಾರ ಸ್ವಾಮಿ ಉತ್ಸವ ಗ್ರಾಮೀಣ ಕೃಷಿಕರ ಮಳೆ, ಬೆಳೆ ಮತ್ತು ಸಮೃದ್ಧಿಯ ಪ್ರತೀಕ.

ಗಂಗಾಮತಸ್ಥರ ಮನೆಯಲ್ಲಿ ಜೋಕುಮಾರ ಹುಟ್ಟುತ್ತಾನೆ ಎಂಬ ವಾಡಿಕೆಯಿದೆ. ಮಣ್ಣಿನಿಂದ ತಯಾರಿಸಿದ ಮೂರ್ತಿಯನ್ನು ಬಿದಿರಿನ ಬುಟ್ಟಿಯಲ್ಲಿ ಪ್ರತಿಷ್ಠಾಪಿಸಿ ಮಹಿಳೆಯರು ತಲೆಯ ಮೇಲೆ ಹೊತ್ತು ಮನೆ ಮನೆಗೆ ತೆರಳುತ್ತಾರೆ, ಜೋಕುಮಾರನ ಕುರಿತು ಜನಪದ ಹಾಡುಗಳನ್ನು ಹಾಡುತ್ತಾ, ಮಳೆ, ಬೆಳೆ ಸಮೃದ್ಧಿಗಾಗಿ ಭಗವಂತನಲ್ಲಿ ಪ್ರಾರ್ಥಿಸುತ್ತಾರೆ. ಮನೆಗಳಿಂದ ಭಕ್ತಿಪೂರ್ವಕವಾಗಿ ಅಕ್ಕಿ, ಜೋಳ ದವಸ, ಧಾನ್ಯ, ಎಣ್ಣೆ, ಮತ್ತು ಕಾಣಿಕೆಯನ್ನು ಪಡೆಯುತ್ತಾರೆ. ಪ್ರಸಾದವಾಗಿ ರೈತ ಕುಟುಂಬದವರು ಅವರ ಬುಟ್ಟಿಯಿಂದ ಅಕ್ಕಿ,ಕಾಡಿಗೆ, ಬೇವಿನಸೊಪ್ಪು ಪಡೆದು ಅದನ್ನು ತಮ್ಮ ಹೊಲದಲ್ಲಿ ಹಾಗೂ ದವಸ ಶೇಖರಿಸುವ ಕಣಜದಲ್ಲಿ ಇಟ್ಟರೆ ಇನ್ನಷ್ಟು ಸಮೃದ್ದಿಯಾಗುತ್ತದೆ ಎನ್ನುವುದು ಕೃಷಿಕರ ನಂಬಿಕೆ.

ಸುಮಾರು ಏಳು ದಿನಗಳ ಕಾಲ ವಿವಿಧ ಗ್ರಾಮಗಳಲ್ಲಿ ಸಂಚರಿಸುವ ಜೋಕುಮಾರನಿಗೆ ಬಳಿಕ ಅಳಲು ಎಂಬ ಅಂತಿಮ ವಿಧಿ ನಡೆಯುತ್ತದೆ. ಏಳನೇ ದಿನ ಹುಣ್ಣಿಮೆಯಂದು ಜೋಕುಮಾರ ಸಾಯುತ್ತಾನೆ ಎಂಬ ನಂಬಿಕೆಯಿದೆ ಬಳಿಕ ಮೂರ್ತಿಯನ್ನು ಊರ ಹೊರಗಿನ ಅಗಸರು ಬಟ್ಟೆ ಒಗೆಯುವ ಬಂಡೆಯ ಕೆಳಗೆ ಇಟ್ಟು ಬರುತ್ತಾರೆ. ಹುಣ್ಣಿಮೆಯಂದು ಉತ್ಸವ ಅಂತ್ಯವಾಗುವುದರಿಂದ ಇದನ್ನು ಜೋಕುಮಾರಸ್ವಾಮಿ ಹುಣ್ಣಿಮೆ ಯಂತಲೂ ಕರೆಯುತ್ತಾರೆ.

ಮಣ್ಣಿನಿಂದ ಹುಟ್ಟಿ ಮಣ್ಣಿಗೆ ಮರಳುವ ಈ ಗ್ರಾಮೀಣ ಕೃಷಿ ಜೋಕುಮಾರ ಉತ್ಸವ ಪ್ರಕೃತಿ ಪೂಜಿಸುವ ವಿಶಿಷ್ಠ ವಿಧಾನವಾಗಿದೆ. ವಿವಿಧ ಸಮುದಾಯಗಳ ಸಹಭಾಗಿತ್ವದೊಂದಿಗೆ ನಡೆಯುವ ಜೋಕುಮಾರ ಉತ್ಸವ ತಲತಲಾಂತರಗಳಿಂದ ಪೂರ್ವಜರಿಂದ ಆಚರಿಸಲ್ಪಡುವ ವಿಶಿಷ್ಟ ಗ್ರಾಮೀಣ ಜನಪದ ಸಂಪ್ರದಾಯ.

# ಸತ್ತರೆಂದು ತಿಳಿದಿದ್ದ ಮಹಿಳೆ ಬದುಕಿದರು!

ಹಿರೇಕೆರೂರು : ತಾಲ್ಲೂಕಿನ ಗೊಡಚಿಕೊಂಡ ಗ್ರಾಮದ ನಿವಾಸಿ ರೇಣುಕಮ್ಮ ಸಂಕೊಳ್ಳಿ (63) ಎಂಬುವವರು, ಅಂತ್ಯಸಂಸ್ಕಾರದ ತಯಾರಿ ಸಂದರ್ಭದಲ್ಲಿ ಉಸಿರಾಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಬದುಕಿರುವ ಘಟನೆ ನಡೆದಿದೆ.

ರೇಣುಕಮ್ಮ ಅವರು ಕುಟುಂಬಸ್ಥರ ಜೊತೆ ಶಿಕಾರಿಪುರ ತಾಲ್ಲೂಕಿನ ಸುಣ್ಣದಕೊಪ್ಪ ಗ್ರಾಮದಲ್ಲಿ ವಾಸವಿದ್ದರು. ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದ ರೇಣುಕಮ್ಮ ಅವರ ಆರೋಗ್ಯದಲ್ಲಿ ಸೆ. 21ರಂದು ರಾತ್ರಿ ಏರುಪೇರು ಉಂಟಾಗಿ-ತ್ತು. ಕುಟುಂಬಸ್ಥರು ಅವರನ್ನು ಸುಣ್ಣದಕೊಪ್ಪದ ಸ್ಥಳೀಯ ವೈದ್ಯರೊಬ್ಬರ ಬಳಿ ಕರೆದೊಯ್ದಿದ್ದರು. ತಪಾಸಣೆ ನಡೆಸಿದ್ದ ವೈದ್ಯ, 'ವೃದ್ಧೆಯ ಉಸಿರಾಟ ಕ್ಷೀಣಿಸಿದೆ. ಬದುಕುವ ಸಾಧ್ಯತೆ ಕಡಿಮೆ. ದೊಡ್ಡ ಆಸ್ಪತ್ರೆಗೆ ಕರೆದೊಯ್ಯಿರಿ' ಎಂದು ಹೇಳಿದ್ದರು. ಅದನ್ನು ನಂಬಿದ್ದ ಕುಟುಂಬಸ್ಥರು, ರೇಣುಕಮ್ಮ ಅವರನ್ನು ವಾಹನದಲ್ಲಿ ಬೇರೆ ಆಸ್ಪತ್ರೆಗೆ ಕೊಂಡೊಯ್ಯುತ್ತಿದ್ದರು. ಮಾರ್ಗಮಧ್ಯೆ ವೃದ್ಧೆ ಸ್ವಲ್ಪವೂ ಅಲುಗಾಡಿರಲಿಲ್ಲ. ಉಸಿರಾಟವೂ ಇಲ್ಲವೆಂದು ಕುಟುಂಬಸ್ಥರು ಭಾವಿಸಿದ್ದರು. ಮೃತಪಟ್ಟಿರಬಹುದೆಂದು ತಿಳಿದು ಸ್ವ-ಂತ ಊರಾದ ಗೊಡಚಿಕೊಂಡ ಗ್ರಾಮಕ್ಕೆ ಸೆ. 22ರಂದು ವೃದ್ಧೆಯನ್ನು ಕರೆದುಕೊಂಡು ಬಂದಿದ್ದರು.




# ಇಂದಿನಿಂದ "ಬಿಂಗೋ" ವಿಶೇಷ ಪಾತ್ರದಲ್ಲಿ ರಾಗಿಣಿ



ಪ್ರತಿಭಾವಂತ ನಿರ್ದೇಶಕ ಶಂಕರ್ ಕೋನಮಾನಹಳ್ಳಿ ಅವರ ಸಾರಥ್ಯದ ಮತ್ತೊಂದು ಚಿತ್ರ ಬಿಂಗೋ ಇಂದಿನಿಂದ ಬಿಡುಗಡೆಯಾಗಿದೆ. ಅಪ್ಪಟ ಕನ್ನಡದ ಪ್ರತಿಭೆ, ಯುವ ನಟ ಆರ್.ಕೆ.ಚಂದನ್ ಈ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದಾರೆ.

ಆರ್.ಕೆ.ಸ್ಟುಡಿಯೋಸ್ ಮತ್ತು ಮುತರಾ ವೆಂಚರ್ಸ್ ಅಡಿ ಲಲಿತಾಸ್ವಾಮಿ ಆರ್.ಪರಾಂಕುಶ ಅವರ ನಿರ್ಮಾಣದ ಈ ಚಿತ್ರದಲ್ಲಿ ನಟ ರಕ್ಷಾ ನಿಂಬರ್ಗಿ ನಾಯಕಿಯಾಗಿ ನಟಿಸಿದ್ದಾರೆ. ಅಲ್ಲದೆ ನಟಿ ರಾಗಿಣಿ ದ್ವಿವೇದಿ ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ನನ್ನ ಪಾತ್ರ ಎರಡು ಶೇಡ್‌ಗಳಲ್ಲಿ ಮೂಡಿಬರಲಿದ್ದು ತುಂಬಾ ವೇರಿಯೇಶನ್ಸ್ ಇದೆ, ಮನಿ, ಫೇಮ್, ಸಕ್ಸಸ್ನಂಥ ವಿಷಯಗಳನ್ನು ಈ ಚಿತ್ರದ ಮೂಲಕ ಹೇಳಹೊರಟಿದ್ದು, ಮಿಸ್ಟೀರಿಯಸ್ ಎಲಿಮೆಂಟ್ಸ್ ಈ ಚಿತ್ರದಲ್ಲಿದೆ ಎಂದವರು ಹೇಳಿದ್ದಾರೆ. ನಿರ್ದೇಶಕ ಶಂಕರ್ ಕೋನಮಾನಹಳ್ಳಿ ಮಾತನಾಡುತ್ತ ಬಿಂಗೋ ಎನ್ನುವ ಟೈಟಲ್ ಯಾಕೆ ಅಂತ ಸಿನಿಮಾ ನೋಡುವಾಗ ಚಿತ್ರ ನೋಡುವಾಗ ಗೊತ್ತಾಗುತ್ತೆ, ರಾಜ್ಯದ ಎಲ್ಲಾ ನಗರಗಳಲ್ಲಿ ನಮ್ಮ ಟೀಮ್ ಪ್ರಚಾರ ಮಾಡಿದ್ದು, ಜನತೆ ಕೂಡ ಚಿತ್ರದ ಬಗ್ಗೆ ನಿರೀಕ್ಷೆಯಲ್ಲಿದ್ದಾರೆ. ಚಿತ್ರದ ಟ್ರೈಲರ್‌ಗೆ ಪ್ರೇಕ್ಷಕರಿಂದ ಒಳ್ಳೆಯ ಪ್ರತಿಕ್ರಿಯೆ ಬರುತ್ತಿದೆ, ಚಂದನ್ ಅವರಜತೆ ಕಿರುತೆರೆಯಲ್ಲಿ ಕೆಲಸ ಮಾಡಿದ್ದೆ, ಒಂದೊಳ್ಳೇ ಕಥೆಯನ್ನು ಅವರು ಮಾಡಿದ್ದಾರೆ. ನಟಿ ರಾಗಿಣಿ ಅವರ ಪಾತ್ರ–ಕ್ಕೆ ಎರಡು ಶೇಡ್ ಇದೆ. ಕಥೆಯ ಬಹುಮುಖ್ಯ ಘಟ್ಟದಲ್ಲಿ ಬರುವಂಥ ಪಾತ್ರವದು. ಚಂದನ್ ಅವರ ಪಾತ್ರ ಎಲ್ಲರ ಗಮನ ಸೆಳೆಯಲಿದೆ ಎಂದು ಹೇಳಿದರು.



ನಾಯಕನಟ ಆರ್.ಕೆ.ಚಂದನ್ ಮಾತನಾಡುತ್ತ ಈ ಹಿಂದೆ ಆದಿತ್ಯ ಜತೆ ಕಿಯೋಸ್ ಚಿತ್ರದಲ್ಲಿ ನಟಿಸಿದ್ದೆ. ಇದು ನನ್ನ ಎರಡನೇ ಚಿತ್ರ. ಲೈಫಲ್ಲಿ ತುಂಬಾ ಆಂಬಿಷನ್ಸ್ ಇಟ್ಟುಕೊಂಡಿರುವ ಸಾಮಾನ್ಯ ಜನರಿಗೆ ಹತ್ತಿರವಾದ ಹುಡುಗನ ಪಾತ್ರ ನನ್ನದು. ಜೀವನದಲ್ಲಿ ಎಲ್ಲವೂ ಗ್ಯಾಂಬ್ಲಿಂಗ್ ಆಗಿದೆ. ನಾನು ನೋಡಿ ಕೇಳಿದಂಥ ನೈಜ ಘಟನೆಗಳನ್ನು ಇಟ್ಟುಕೊಂಡು ನಾನೇ ಈ ಕಥೆ ಮಾಡಿದ್ದೇನೆ, ನಮ್ಮ ಸಹೋದರ ಪುನೀತ್ ನನಗೆ ತಂದೆ–ಯ ಸ್ಥಾನದಲ್ಲಿದ್ದು ಸಪೋರ್ಟ್ ಮಾಡ್ತಿದ್ದಾರೆ. ನನ್ನ ಭಾವ ಪರಾಂಕುಶ್ ಅವರೂ ಸಹ ನಿರ್ಮಾಣದಲ್ಲಿ ಜತೆಯಾಗಿದ್ದಾರೆ. ಈಗಾಗಲೇ ಎಲ್ಲಾ ಕಡೆಗೂ ನಮ್ಮ ಚಿತ್ರಕ್ಕೆ ಉತ್ತಮ ಪ್ರಚಾರ ಸಿಕ್ಕಿದೆ, ಚಿತ್ರದ ಕಂಟೆಂಟ್ ಎಲ್ಲರಿಗೂ ಅದರಲ್ಲೂ ಈಗಿನ ಕಾಲದ ಯೂಥ್‌ಗೆ ತುಂಬಾ ಇಷ್ಟವಾಗುತ್ತದೆ ಎಂದು ಹೇಳಿದರು. ಈ ಚಿತ್ರಕ್ಕೆ ನಟರಾಜ್ ಮುದ್ದಾಲ್ ಅವರ ಛಾಯಾಗ್ರಹಣ, ಹಿತನ್ ಹಾಸನ್ ಅವರ ಸಂಗೀತ ಸಂಯಜನೆ ಹಾಗೂ ವೆಂಕಟೇಶ್ ಯುವಿಡಿ ಅವರ ಸಂಕಲನವಿದೆ. ರಾಜೇಶ್ ನಟರಂಗ, ಮಜಾಟಾಕೀಸ್ ಪವನ್, ಮುರಳಿ ಪೂರ್ವಿಕ್, ಅಪೂರ್ವ, ಶ್ರವಣ್ ಹಾಗೂ ಇತರರು ಉಳಿದ ತಾರಾಗಣದಲ್ಲಿದ್ದಾರೆ.

# ತ್ರಿಕಾರಂ ಟ್ರೈಲರ್ ಮತ್ತು ಹಾಡು ಬಿಡುಗಡೆ



'ತ್ರಿಕಾರಂ' ಚಿತ್ರದ ಟ್ರೈಲರ್ ಮತ್ತು ಹಾಡಿನ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಮಾಸ್ ಟ್ರೇಲರ್, ನವಿರಾದ ಪ್ರೇಮಗೀತೆ, ಮೊನ್ನೆಯಷ್ಟೇ ಹೊಸದುರ್ಗದಲ್ಲಿ 50 ಅಡಿ ಕಟ್‌ಔಟ್ ಅನಾವರಣ ಕಾರ್ಯಕ್ರಮ ಮತ್ತು ಸಾಹಸ ದೃಶ್ಯ ಮಾಡುವಾಗ ಬೆಂಕಿ ಅವಘಡದಿಂದ ನಾಯಕ, ನಾಯಕಿ ಪಾರಾದ ತುಣುಕುಗಳು ದೊಡ್ಡಪರದೆಯ ಮೇಲೆ ಬಿತ್ತರಗೊಂಡಿತು. 'ಇದು ಸ್ಮಶಾನ ಅಲ್ಲ' ಎಂಬ ಕ್ಯಾಚಿ ಅಡಿಬರಹ ಇದಕ್ಕಿದೆ. ರಾಜಕೀಯ ಮುಖಂಡ ರವೀಂದ್ರ ಆಗಮಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದರು.

ನಾಟಕಪ್ರೇಮಿಯಾದ ಜಿ.ಗಣೇಶ್‌ಮೂರ್ತಿ ಅವರು ಸದ್ಗುರು ಸಿನಿ ಪ್ರೊಡಕ್ಷನ್ ಅಡಿಯಲ್ಲಿ ಈ ಚಿತ್ರವನ್ನು ನಿರ್ಮಿಸುವುದರ ಜತೆಗೆ ಖಳನಾಯಕನ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಹಲವು ನಿರ್ದೇಶಕರ ಬಳಿ ಕೆಲಸ ಕಲಿತಿರುವ ಅಜ್ಜಂಪುರದ ದಿಲೀಪ್‌ಕುಮಾರ್.ಜೆ.ಆರ್. ಅವರು ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ.

ಹರ್ಷವರ್ಧನ್ ಕೇಸರಿ ಚಿತ್ರದ ನಾಯಕನಾಗಿದ್ದು, ನಿಶ್ಚಿತ ಶೆಟ್ಟಿ ನಾಯಕಿಯಾಗಿ ನಟಿಸಿದ್ದಾರೆ, ಉಳಿದಂತೆ ನಾಗೇಂದ್ರ ಅರಸ್, ಬಲ ರಾಜವಾಡಿ, ಮಂಜು ಪಾವಗಡ ಮುಂತಾದವರು ಅಭಿನಯಿಸಿದ್ದಾರೆ. ಹೊನ್ನಾಳಿ ಯಾಸಿನ್ ಅವರ ಛಾಯಾಗ್ರಹಣ, ಸತೀಶ್ ಚಂದ್ರಯ್ಯ ಅವರ ಸಂಕಲನ, ಚಂದ್ರು ಬಂಡೆ ಅವರ ಸಾಹಸ, ಹೈಟ್ಮಂಜು–ಕಂಬಿರಾಜ್ ಅವರ ನೃತ್ಯ, ಡಾ.ವಿ.ನಾಗೇಂದ್ರಪ್ರಸಾದ್, ಭರ್ಜರಿ ಚೇತನ್, ಪ್ರಮೋದ್ ಮರವಂತೆ, ಕೇಶವ, ಹರ್ಷವರ್ಧನ್ ಅವರ ಸಾಹಿತ್ಯ ಈ ಚಿತ್ರಕ್ಕಿದೆ.

ಈವೇಳೆ ಮಾತನಾಡಿದ ನಿರ್ದೇಶಕರು, ನಾಯಕ, ನಾಯಕಿ ಹಾಗೂ ವಿಲನ್ ಈ ಮೂರು ಪಾತ್ರಗಳ ಸುತ್ತ ಕಥೆ ಸಾಗುವುದರಿಂದ ಚಿತ್ರಕ್ಕೆ ಇದೇ ಶೀರ್ಷಿಕೆಯನ್ನು ಇಡಲಾಗಿದೆ. ಈ ಮೂರು ಪಾತ್ರಗಳು ಯಾವ ಕಾರಣಕ್ಕೆ ಜತೆಯಾಗುತ್ತವೆ ಎಂಬುದನ್ನು ಚಿತ್ರದಲ್ಲಿ ನೋಡಬೇಕು. ದೈವಶಕ್ತಿ ಮತ್ತು ದುಷ್ಟಶಕ್ತಿಯ ನಡುವಿನ ಹೋರಾಟ. ಮುಗಿಯದ ಕರ್ಮ ಧರ್ಮದ ಲೆಕ್ಕಚಾರ. ಇವೆಲ್ಲಾ ಸನ್ನಿವೇಶಗಳು ಸಸ್ಪೆನ್ಸ್ ಥ್ರಿಲ್ಲರ್ ಮಾದರಿಯಲ್ಲಿ ಸಾಗುತ್ತದೆ. ಹೊಸದುರ್ಗ, ಚಿತ್ರದುರ್ಗ, ಮಾರಿಕಣಿವೆಯಲ್ಲಿ ದೊಡ್ಡ ಸೆಟ್ ಹಾಕಿ ಈ ಚಿತ್ರದ ಸಂಪೂರ್ಣ ಚಿತ್ರೀಕರಣ ನಡೆಸಲಾಗಿದೆ ಎಂದು ಹೇಳಿದರು,

ನಾಯಕ ಹರ್ಷವರ್ಧನ್ ಕೇಸರಿ ಮಾತನಾಡುತ್ತ ಮುಗ್ಧ ಹಾಗೂ ರುದ್ರನಾಗಿ ಎರಡು ಶೇಡ್ ಪಾತ್ರಗಳಲ್ಲಿ ನಾನು ಕಾಣಿಸಿಕೊಂಡಿದ್ದೇನೆ. ನಾವುಗಳು ನೋವು ಅನುಭವಿಸಿ ಖುಷಿಯಿಂದ ನಟಿಸಿದ್ದೇವೆ. ಸಹ ನಿರ್ದೇಶಕನಾಗಲು ಬಂದದವನಿಗೆ ಹೀರೋ ಆಗುವ ಅವಕಾಶ ನೀಡಿದರು. ಅದಕ್ಕಾಗಿ ನಿರ್ದೇಶಕರು ಮತ್ತು ನಿರ್ಮಾಪಕರಿಗೆ ಚಿರಋಣಿ ಆಗಿದ್ದೇನೆಂದು ಭಾವುಕರಾಗಿ ಹೇಳಿದರು.

ನಾಯಕಿ ನಿಶ್ಚಿತ ಶೆಟ್ಟಿ ಮಾತನಾಡಿ ನಾನು ಜಂಬದ ಹುಡುಗಿ, ಮೃದು ಸ್ವಭಾವದವಳಾಗಿ ಇರುತ್ತೇನೆ. ಹಗಲು ಹೊತ್ತು ನಾಯಕನೊಂದಿಗೆ ಜಗಳವಾಡುತ್ತಿದ್ದರೆ, ಕತ್ತಲಾದರೆ ಅವನ ಹಿಂದೆಯೇ ಓಡಾಡುತ್ತಿರುತ್ತೇನೆ. ಅದೇಕೆ ಎಂಬುದಕ್ಕೆ ಚಿತ್ರದಲ್ಲಿ ಉತ್ತರವಿದೆ ಎಂದು ಹೇಳಿದರು.

ನಿರ್ಮಾಪಕ ಜಿ.ಗಣೇಶ್‌ಮೂರ್ತಿ ಮಾತನಾಡುತ್ತ ಚಿಕ್ಕ ವಯಸ್ಸಿನಿಂದಲೂ ನನಗೆ ಸಿನಿಮಾ ಮಾಡುವ ಆಸೆಯಿತ್ತು, ತ್ರಿಕಾರಂ ಚಿತ್ರ ನಿರ್ಮಾಣ ಮಾಡುವುರೊಂದಿಗೆ ಖಳನಟನ ಪಾತ್ರ ಮಾಡಿದ್ದೇನೆ ಎಂದು ಹೇಳಿದರು,

# ಲಂಬೋದರ 2.0 ಚಿತ್ರದಲ್ಲಿ ಹ್ಯೂಮನಾಯ್ಡ್ ರೋಬೋಟ್

ಒಂದು ಸರಳಪ್ರೇಮಕಥೆ ಖ್ಯಾತಿಯ ಸಿಂಪಲ್ ಸುನಿ ಅವರ ನಿರ್ದೇಶನದ ಮತ್ತೊಂದು ಚಿತ್ರ 'ಲಂಬೋದರ 2.0' ಈ ಚಿತ್ರವು ಚಿತ್ರರಂಗದಲ್ಲೇ ಹೊಸ ಇತಿಹಾಸ ಬರೆಯಲು ಸಜ್ಜಾಗಿದೆ. ಈ ಚಿತ್ರದಲ್ಲಿ ದೇಶದಲ್ಲೇ ಮೊದಲಬಾರಿಗೆ ನೈಜ ಹ್ಯೂಮನಾಯ್ಡ್ ರೋಬೋಟ್ ಒಂದು ಪ್ರಮುಖ ಪಾತ್ರ ನಿರ್ವಹಿಸುತ್ತಿದೆ. ಬೆಂಗಳೂರು ಮೂಲದ ಮಚಾನಿ ರೋಬೋಟಿಕ್ ಸಂಸ್ಥೆ ಅಭಿವೃದ್ಧಿಪಡಿಸಿರುವ ಜಿಯಾ ಎಂಬ ಹ್ಯೂಮನಾಯ್ಡ್ ರೋಬೋಟ್ ಈ ಪಾತ್ರಕ್ಕೆ ಜೀವ ತುಂಬುತ್ತಿರುವುದು ವಿಶೇಷ. ಇದು ಯಾವುದೇ ಕಂಪ್ಯೂಟರ್ ಗ್ರಾಫಿಕ್ಸ್ ಅಥವಾ ರೋಬೋಟ್ ವೇಷ ಧರಿಸಿರುವ ಕಲಾವಿದರಲ್ಲ; ಬದಲಿಗೆ ಜಿಯಾ ಸ್ವತಃ ತಂತ್ರಜ್ಞಾನ ಆಧಾರಿತ ಕಲಾವಿದೆಯಾಗಿ ಬೆಳ್ಳಿತೆರೆಯ ಮೇಲೆ ಕಾಣಿಸಿಕೊಳ್ಳುವ ಮೂಲಕ ಭಾರತೀಯ ಚಿತ್ರರಂಗದ ಭವಿಷ್ಯದ ಹೆಜ್ಜೆಗೆ ಮುನ್ನುಡಿ ಬರೆದಿದೆ. ಸೈನ್ಸ್–ಫಿಕ್ಷನ್ ಹಾಗೂ ಸೋಶಿಯಲ್ ಥ್ರಿಲ್ಲರ್ ಜಾನರ್ ಕಥಾಹಂದರ ಒಳಗೊಂಡ ಈ ಚಿತ್ರದಲ್ಲಿ ಅನಿಲ್ ಶೆಟ್ಟಿ ನಾಯಕನಾಗಿ ನಟಿಸಿದ್ದು, ಸಾಚಿ ಬಿಂದ್ರಾ ನಾಯಕಿಯಾಗಿ ಸಾಥ್ ನೀಡಿದ್ದಾರೆ. ಜೊತೆಗೆ, ಬಾಲಿವುಡ್ ನಟ ಕುನಾಲ್‌ಕಪೂರ್ ಅವರು ಈ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ಮೂಲಕ ಕುನಾಲ್‌ಕಪೂರ್ ಅಧಿಕೃತವಾಗಿ ಕನ್ನಡ ಚಿತ್ರರಂಗಕ್ಕೆ ಕಾಲಿಡುತ್ತಿದ್ದು, ಅವರಪಾತ್ರ ಚಿತ್ರಕಥೆಗೆ ಮಹತ್ವದ ತಿರುವು ನೀಡಲಿದೆ ಎಂದು ಸಿಂಪಲ್ ಸುನಿ ತಿಳಿಸಿದ್ದಾರೆ.




ಡಿಜಿಟಲ್ ಯುಗದಲ್ಲಿ ಇಂದಿನ ಯುವಜನರ ಬದುಕು ಮತ್ತು ಸಾಮಾಜಿಕ ಜಾಲತಾಣಗಳ ಪ್ರಭಾವದಿಂದ ಎದುರಾಗುತ್ತಿರುವ ಸಂಕೀರ್ಣತೆಗಳೇ ಈ ಚಿತ್ರದ ಪ್ರಮುಖ ಕಥಾವಸ್ತು. ಕೃತಕ ಬುದ್ಧಿಮತ್ತೆ(ಎಐ) ಇಡೀ ಜಗತ್ತನ್ನೇ ಆಳುತ್ತಿರುವ ಇಂದಿನ ಕಾಲಘಟ್ಟದಲ್ಲಿ ಬೆಂಗಳೂರಿನ ಯುವಕನೊಬ್ಬನ ಜೀವನದ ಮೂಲಕ ನಿಜ ಜಗತ್ತು ಮತ್ತು ಡಿಜಿಟಲ್ ಜಗತ್ತಿನ ನಡುವಿನ ಸಂಘರ್ಷವನ್ನು ಅನಾವರಣಗೊಳಿಸಲಾಗಿದೆ. ಸಾಮಾಜಿಕ ಜಾಲತಾಣಗಳ ಅತಿಯಾದ ಗೀಳು, ಒಂಟಿತನ, ಸಂತೋಷದ ಭ್ರಮೆ, ಡಿಜಿಟಲ್ ವ್ಯಸನ ಹಾಗೂ ಡಿಜಿಟಲ್ ನಿಯಂತ್ರಣದಂತಹ ಸಮಕಾಲೀನ ಜ್ವಲಂತ ವಿಚಾರಗಳನ್ನು ಈ ಚಿತ್ರದಲ್ಲಿ ಚರ್ಚಿಸಲಾಗಿದೆ ಎಂದು ಸುನಿ ವಿವರಿಸಿದ್ದಾರೆ. ಲಂಬೋದರ 2.0 ನಾವು ಪ್ರಸ್ತುತ ಬದುಕುತ್ತಿರುವ ವಾಸ್ತವ ಪ್ರಪಂಚವನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುವ ಕಥೆ. ಇಂದಿನ ತಂತ್ರಜ್ಞಾನವು ನಮ್ಮ ಭಾವನೆಗಳು ಹಾಗೂ ನಿರ್ಧಾರಗಳ ಮೇಲೆ ಹೇಗೆ ತನ್ನ ಪ್ರಭಾವ ಬೀರುತ್ತದೆ ಎಂಬುದನ್ನು ಈ ಚಿತ್ರ ತೆರೆದಿಡಲಿದೆ.

# ರಣಬಾಲಿ ಎಂದಯ್ಯಾ ಸಾಮಿ ಲಿರಿಕಲ್ ಹಾಡು

ರಿಯಲ್ ದಂಪತಿ ವಿಜಯ್ ದೇವರಕೊಂಡ ಹಾಗೂ ರಶ್ಮಿಕಾ ಮಂದಣ್ಣ ಅಭಿನಯದ ಬಹುಭಾಷಾ ಚಿತ್ರ ರಣಬಾಲಿ ಚಿತ್ರರಂಗದಲ್ಲಿ ದೊಡ್ಡಮಟ್ಟದ ನಿರೀಕ್ಷೆಯನ್ನು ಹುಟ್ಟುಹಾಕಿದೆ. ರಾಹುಲ್ ಸಂಕೃತ್ಯನ್ ಅವರ ನಿರ್ದೇಶನದ ಈ ಬಿಗ್ ಬಜೆಟ್‌ನ ಐತಿಹಾಸಿಕ ಚಿತ್ರ ದಸರಾ ಪ್ರಯುಕ್ತ ಅ.16ರಂದು ಕನ್ನಡ, ತೆಲುಗು ಭಾಷೆಯಲ್ಲಿ ಬಿಡುಗಡೆಯಾಗಲಿದೆ. ಇತ್ತೀಚೆಗೆ ಈ ಚಿತ್ರದ 'ಎಂದಯ್ಯಾ ಸಾಮಿ' ಎಂಬ ಲಿರಿಕಲ್ ಹಾಡು ಬಿಡುಗಡೆ–ಯಾಗಿದೆ. ಅಜಿತ್ ಅತುಲ್ ಅವರ ಸಂಗೀತ, ಶ್ವೇತಾಮೋಹನ್ ಹಾಗೂ ಅಜಯ್ ಗೊಗಾವಲೆ ಅವರ ಕಂಠದಲ್ಲಿ ಮೂಡಿಬಂದಿರುವ ಈ ಹಾಡು 19ನೇ ಶತಮಾನದ ಮದುವೆಯ ಸಂಭ್ರಮ, ಪ್ರೀತಿ ಹಾಗೂ ಗ್ರಾಮೀಣ ಸೊಗಡನ್ನು ಅನಾವರಣಗೊಳಿಸಿದೆ. ನಾಯಕ, ನಾಯಕಿಯ ನಡುವಿನ ನವಿರು ಪ್ರೀತಿ, ರಸಮಯ ಕ್ಷಣಗಳು ಮತ್ತು ಮದುವೆ ಸಂಭ್ರಮವನ್ನು ಈ ಹಾಡಲ್ಲಿ ಕಟ್ಟಿಕೊಡಲಾಗಿದೆ.

ಈ ಹಾಡಿನ ವಿಶೇಷತೆ ಏನೆಂದರೆ 19ನೇ ಶತಮಾನದ ಸಾಂಪ್ರದಾಯಿಕ ಕಲ್ಯಾಣ ಮಹೋತ್ಸವದ ವಾತಾವರಣವನ್ನು ಮರುಸೃಷ್ಟಿಸಿರುವುದು. 1854ರಿಂದ 1878ರ ನಡುವಿನ ಬ್ರಿಟಿಷರ ಆಳ್ವಿಕೆಯ ಕಾಲಘಟ್ಟದಲ್ಲಿ ನಡೆದಂಥ ನೈಜ ಐತಿಹಾಸಿಕ ಘಟನೆಗಳನ್ನು ಆಧರಿಸಿ ನಿರ್ಮಾಣವಾಗಿರೋ ಈ ಚಿತ್ರದಲ್ಲಿ ಅಂದಿನ ಗ್ರಾಮೀಣರ ಬದುಕು, ಸಂಪ್ರದಾಯ, ಹಬ್ಬದ ಸೊಬಗು ಹಾಗೂ ಜನಜೀವನವನ್ನು ಹಾಡಿನ ಮೂಲಕವೂ ಕಟ್ಟಿಕೊಡಲಾಗಿದೆ. ನವದಂಪತಿಗಳ ನಡುವಿನ ಮುಗ್ಧ ಪ್ರೀತಿ, ತುಂಟಾಟ ಹಾಗೂ ಭಾವನಾತ್ಮಕ ಕ್ಷಣಗಳನ್ನು ಒಳಗೊಂಡ ಹಾಡು ಚಿತ್ರದ ಪ್ರೇಮಕಥೆಯ ಆಯಾಮವನ್ನು ಪರಿಚಯಿಸುವಂತಿದೆ.



# ಬಾರ್ಡರ್ ಡೈರೀಸ್ ಮೆಲೋಡಿ ಹಾಡು

ನೈಜಘಟನೆ ಹಾಗೂ ಜೀವಂತ ಪಾತ್ರಗಳ ಹಿನ್ನೆಲೆಯಲ್ಲಿ ರೂಪುಗೊಂಡಿರುವ ಬಾರ್ಡರ್ ಡೈರೀಸ್ ಚಿತ್ರದ ಯಾರೋ ನೀನು ಯಾರೋ ನೀನು ಎಂಬ ಮೆಲೋಡಿ ಹಾಡು ಇತ್ತೀಚೆಗೆ ಬಿಡುಗಡೆಯಾಗಿದೆ. ಹೊಯ್ಸಳ ಫಿಲಂಸ್ ಬ್ಯಾನರ್ ಅಡಿಯಲ್ಲಿ ಹೊಯ್ಸಳ ಕೊಣನೂರು ಅವರು ಈ ಚಿತ್ರವನ್ನು ನಿರ್ಮಿಸಿದ್ದು, ಯುವಪ್ರತಿಭೆ ಎಎಸ್‌ಜಿ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಜೂಡಾ ಸ್ಯಾಂಡಿ ಸಂಗೀತ ಸಂಯೋಜಿಸಿರುವ, ಎಎಸ್‌ಜಿ ಅವರ ಸಾಹಿತ್ಯವಿರುವ ಈ ಹಾಡಿಗೆ ಸಿದ್ಧಾರ್ಥ ಬೆಳ್ಮಣ್ಣು ಮತ್ತು ಶ್ರೀಲಕ್ಷ್ಮಿ ಬೆಳ್ಮಣ್ಣು ಧ್ವನಿಯಾಗಿದ್ದಾರೆ.

ವೇದಿಕೆಯಲ್ಲಿ ಮಾತನಾಡಿದ ನಿರ್ದೇಶಕರು "ನನ್ನ ನಿಜವಾದ ಹೆಸರು ಶಶಿಕುಮಾರ್. ಇದು ಕೇವಲ ಕರ್ನಾಟಕದ ಹುಡುಗ ಮತ್ತು ತಮಿಳುನಾಡಿನ ಹುಡುಗಿಯ ಪ್ರೇಮಕಥೆ ಮಾತ್ರವಲ್ಲ. ಅತ್ತಿಬೆಲೆಯ ಆಚೆಗಿನ ಗಡಿಭಾಗದಲ್ಲಿ ಕಂಡುಬರುವ ವಿಶಿಷ್ಟ ಜೀವನಶೈಲಿ ಮತ್ತು ಅಲ್ಲಿ ನಾನು ಕಂಡ ನೈಜಪಾತ್ರಗಳನ್ನು ಈ ಚಿತ್ರದಲ್ಲಿ ತೋರಿಸಿದ್ದೇನೆ. ಹತ್ತು ವರ್ಷಗಳ ಹಿಂದೆ ನಾನು ಓಡಾಡುತ್ತಿದ್ದ ಜಾಗದ ನೆನಪುಗಳು ಈ ಕಥೆ ಬರೆಯಲು ಪ್ರೇರಣೆ ನೀಡಿತು. ನಾಯಕಿ ಆ ಜಾಗಕ್ಕೆ ಬಂದ ನಂತರ ಅಲ್ಲಿನ ಪ್ರಪಂಚ ಹೇಗೆ ತೆರೆದುಕೊಳ್ಳುತ್ತದೆ ಎಂಬುದೇ ಚಿತ್ರದ ತಿರುಳು. ಮೇಲ್ನೋಟಕ್ಕೆ ಇದೊಂದು ಪ್ರೇಮಕಥೆಯಂತೆ ಕಂಡರೂ, ಒಳಗೆ ತೀವ್ರವಾದ ಡ್ರಾಮಾ, ಕ್ರೈಮ್ ಮತ್ತು ಸಾಮಾಜಿಕ ವಾಸ್ತವತೆಗಳ ಸಂಕೀರ್ಣತೆಯಿದೆ" ಎಂದರು.

ಹೊಸೂರು ಮತ್ತು ತಮಿಳುನಾಡಿನ ಗಡಿಭಾಗಗಳಲ್ಲಿ ಅಲ್ಲದೆ ಚನ್ನಪಟ್ಟಣ, ಮಾಗಡಿ ಹಾಗೂ ಬೆಂಗಳೂರಿನಲ್ಲಿ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಈಗಾಗಲೇ ಪೋಸ್ಟ್ ಪ್ರೊಡಕ್ಷನ್ ಮತ್ತು ಸೆನ್ಸಾರ್ ಕೂಡ



ಆಗಿದ್ದು, ಶೀಘ್ರದಲ್ಲೇ ಚಿತ್ರ ಪ್ರೇಕ್ಷಕರ ಮುಂದೆ ಬರಲಿದೆ. ಇತ್ತೀಚೆಗಷ್ಟೇ ನಿರ್ಮಾಪಕರಿಗೆ ಪೂರ್ಣ ಸಿನಿಮಾ ತೋರಿಸಲಾಗಿದ್ದು, ಅವರು ಸಂತಸ ವ್ಯಕ್ತಪಡಿಸಿರುವುದು ತಂಡದ ಹುಮ್ಮಸ್ಸನ್ನು ಹೆಚ್ಚಿಸಿದೆ" ಎಂದರು. ಈ ಚಿತ್ರದಲ್ಲಿ ಅಂಜನ್ ನಾಗೇಂದ್ರ, ಅಶ್ವಿತಾ ಹೆಗ್ಡೆ ಮುಖ್ಯ ಭೂಮಿಕೆಯಲ್ಲಿ ನಟಿಸಿದ್ದು, ಗೋಪಾಲಕೃಷ್ಣ ದೇಶಪಾಂಡೆ, ಶಿವರಾಜ್ ಕೆ.ಆರ್. ಪೇಟೆ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.

ಚಿತ್ರತಂಡಕ್ಕೆ ಶುಭ ಕೋರಿದ ಸಾಹಿತಿ ಕವಿರಾಜ್, "ಕನ್ನಡ ಚಿತ್ರರಂಗದಲ್ಲಿ ಸಾವಿರಾರು ಕೋಟಿ ಬಜೆಟ್‌ನ ಕಮರ್ಷಿಯಲ್ ಸಿನಿಮಾಗಳ ಜೊತೆಗೆ, ಹೊಸ ಕನಸುಗಳನ್ನು ಹೊತ್ತು ಬರುವ ಪ್ರತಿಭಾವಂತರ ಇಂತಹ ಕಂಟೆಂಟ್ ಆಧಾರಿತ ಸಿನಿಮಾಗಳೂ ಗೆಲ್ಲಬೇಕು. ಪೋಸ್ಟರ್ ನೋಡಿದಾಗಲೇ ಗಡಿಭಾಗದ ಸೂಕ್ಷ್ಮಕಥೆ ಹೇಳುವಂತೆ ಭರವಸೆ ಮೂಡಿಸುತ್ತದೆ. ಚಿತ್ರರಂಗದ ಬೆಳವಣಿಗೆಗೆ ಪರಸ್ಪರ ಕಾಲೆಳೆಯುವುದನ್ನು ಬಿಟ್ಟು ನಾವೆಲ್ಲರೂ ಒಗ್ಗಟ್ಟಾಗಿ ನಿಲ್ಲಬೇಕು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.